ಸಂಪುಟ : 8 ಸಂಚಿಕೆ : 148 ಪುಟ : 4 ಬೆಲೆ : 3.00 ಶುಕ್ರವಾರ ಜುಲೈ 14, 2023 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 8 Issue : 148 Pages : 4 Price : 3.00 Friday July 14, 2023 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

ಮಾರ್ಷಲ್ ಆರ್ಟ್ ಚಾಂಪಿಯನ್‌ಶಿಪ್‌ನಲ್ಲಿ ಜಿ ವಿ ಸಿಪ್ರಿಗೆ ಪದಕ

■ ವಿಜಯಸಾಕ್ಷಿ ಸುದ್ದಿ, ಗದಗ

24ನೇ ಸೀನಿಯರ್ ಎಸ್‌ಕ್ಯುಎವೈ ಮಾರ್ಶಲ್ ಆರ್ಟ್ ನ್ಯಾಶನಲ್ ಚಾಂಪಿಯನ್‌ಶಿಪ್ 2023–24ನೇ ಸಾಲಿನಲ್ಲಿ ಜೂನ್ 22ರಿಂದ 25ರವರೆಗೆ ಕುರುಕ್ಷೇತ್ರ ಹರಿಯಾಣ ರಾಜ್ಯದಲ್ಲಿ ನಡೆದ ಸ್ಪರ್ಧೆಯಲ್ಲಿ ಕರ್ನಾಟಕ ರಾಜ್ಯದ ಗದಗ ಜಿಲ್ಲೆಯ ಗೃಹರಕ್ಷಕ ದಳದ ಜಿ ವಿ ಸಿಪ್ರಿ ಇವರು ಗದಗ ಘಟಕ ಸ್ಪರ್ಧೆಗೆ ಭಾಗವಹಿಸಿ ಕಂಚಿನ ಪದಕವನ್ನು ಪಡೆದುಕೊಂಡಿದ್ದಾರೆ.

ವಿಜೇತರನ್ನು ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್ ಕೆ ಪಾಟೀಲ, ಗೃಹರಕ್ಷಕ ದಳದ ಜಿಲ್ಲಾ ಸಮಾದೇಷ್ಟರಾದ ವಿಶ್ವನಾಥ ಸಿ ಯಳಮಲಿ, ಕಚೇರಿಯ ಸಿಬ್ಬಂದಿ ವರ್ಗ, ಜಿಲ್ಲಾ ಗೃಹರಕ್ಷಕ ದಳದ ಸಿಬ್ಬಂದಿಗಳು ಅಭಿನಂದಿಸಿದ್ದಾರೆ ಎಂದು ಗೃಹರಕ್ಷಕ ದಳ ಸಮಾದೇಷ್ಟರ ಕಚೇರಿಯ ಪ್ರಕಟಣೆ ತಿಳಿಸಿದೆ.

ಮಳೆಗಾಗಿ ಕುರಿ–ಟಗರಿನ ಮದುವೆ

■ ವಿಜಯಸಾಕ್ಷಿ ಸುದ್ದಿ, ಮುಂಡರಗಿ

ತಾಲೂಕಿನ ವೆಂಕಟಾಪುರ ಗ್ರಾಮದಲ್ಲಿ ಮಳೆಗಾಗಿ ಪ್ರಾರ್ಥಿಸಿ ಕರವೇ ಸ್ವಾಭಿಮಾನಿ ಬಣದ ರಾಜ್ಯ ರೈತ ಘಟಕದ ಅಧ್ಯಕ್ಷ ಹಾಲಪ್ಪ ಅರಹಣಿಸಿ ಅವರ ನೇತೃತ್ವದಲ್ಲಿ ಮಳೆಗಾಗಿ ಕುರಿ ಮತ್ತು ಟಗರಿನ ಮದುವೆ ಕಾರ್ಯಕ್ರಮ ನೆರವೇರಿದೆ.

ಮುಂಗಾರು ಸಮಯ ಪ್ರಾರಂಭವಾಗಿ ಜುಲೈ ತಿಂಗಳ ಅರ್ಧ ಸಮಯ ಕಳೆದರೂ ಇದುವರೆಗೂ ವರುಣರಾಯ ಕೃಪೆದೋರಿಲ್ಲ. ಮಳೆಯನ್ನೇ ಅವಲಂಬಿಸಿದ ರೈತರು, ಕೃಷಿ ಕಾರ್ಮಿಕರು ಬಹಳ ಸಂಕಷ್ಟದಲ್ಲಿದ್ದಾರೆ. ಮಳೆಗಾಗಿ ಪ್ರಾರ್ಥಿಸಿ ಕಪ್ಪೆ, ಕತ್ತೆಗಳ ಮದುವೆ ಮಾಡಿಸುತ್ತಾರೆ. ಅಂತೆಯೇ, ಗ್ರಾಮೀಣ ಭಾಗದ ಸಂಪ್ರದಾಯದಂತೆ ಲಕ್ಷ್ಮೀ ಎಂದೇ ಕರೆಸಿಕೊಳ್ಳುವ ಪ್ರಾಣಿಗಳ ಮದುವೆ ಮಾಡಿದರೆ ಮಳೆಯಾಗುತ್ತದೆ ಎನ್ನುವ ಭಾವನೆ ಗ್ರಾಮೀಣ ಭಾಗದಲ್ಲಿದೆ.

ಮೂಕ ಪ್ರಾಣಿಗಳ ಕೂಗನ್ನಾದರೂ ಕೇಳಿ ಮಳೆರಾಯ ಬರಲೆಂದು ಹಾಲಪ್ಪ ಅರಹುಣಸಿಯವರು ಕುರಿ ಮತ್ತು ಟಗರಿನ ಮದುವೆ ಮಾಡಿಸಿ, ಮಳೆ ಸುರಿಸುವಂತೆ ದೇವರಲ್ಲಿ ಪ್ರಾರ್ಥಿಸಿದ್ದಾರೆ.

ಬರ ಪೀಡಿತ ಪ್ರದೇಶವೆಂದು ಘೋಷಿಸಲು ಮನವಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕಳೆದ ವರ್ಷ ಅತಿವೃಷ್ಟಿಯಿಂದ ಕಂಗಾಲಾಗಿದ್ದ ರೈತರಿಗೆ ಈ ಬಾರಿ ಮುಂಗಾರು ಮಳೆ ಕೈಕೊಟ್ಟಿದ್ದು, ರೈತರ ಪರಿಸ್ಥಿತಿ ಚಿಂತಾಜನಕವಾಗುತ್ತಿದೆ. ಈ ಹಿನ್ನೆಲೆಯಲ್ಲಿ ಗದಗ ಜಿಲ್ಲೆಯನ್ನು ಬರಗಾಲ ಪ್ರದೇಶವೆಂದು ಘೋಷಿಸಿ ರೈತರಿಗೆ ಸೂಕ್ತ ಪರಿಹಾರವನ್ನು ಕಲ್ಪಿಸಬೇಕೆಂದು ಆಗ್ರಹಿಸಿ ಗುರುವಾರ ಭಾರತೀಯ ಕಿಸಾನ್ ಸಂಘ ಕರ್ನಾಟಕ ಉತ್ತರ ಪ್ರಾಂತದ ಜಿಲ್ಲಾ ಸಮಿತಿಯವರು ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಮುದಕಮ್ಮನವರ ಅವರ ಮೂಲಕ ರಾಜ್ಯದ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಅಧ್ಯಕ್ಷ ಎಮ್ ಜಿ ನೀಲಪ್ಪಗೌಡರ, ಜಿಲ್ಲಾ ಪ್ರದಾನ ಕಾರ್ಯದರ್ಶಿ ಸೋಮಶೇಖರ ಹಿರೇಮಠ, ಜಿಲ್ಲಾ ಉಪಾಧ್ಯಕ್ಷ ರಾಜಶೇಖರ್ ಪಾಟೀಲ, ಬಸವರಾಜ ಅಸುಂಡಿ, ವೆಂಕಟೇಶ್ ದೊಂಗಡೆ, ಟಾಕಪ್ಪ ಸಾಥಪತೆ, ರಮೇಶ ಕೋಳಿವಾಡ, ಬಸನಗೌಡ ಪಾಟೀಲ, ಮಂಜುನಾಥ್ ಜಲರೆಡ್ಡಿ, ಎನ್ ವಿ ಕಿತ್ತೂರ, ಜಿ ಎಸ್ ಪಾಟೀಲ, ಬಿ ಎಸ್ ಪಾಟೀಲ ಹಾಗೂ ಹಲವಾರು ಗ್ರಾಮಗಳಿಂದ ಆಗಮಿಸಿದ ನೂರಾರು ರೈತರು ಪಾಲ್ಗೊಂಡಿದ್ದರು.

ಡಿಪ್ಲೋಮಾ ನೇರ ಪ್ರವೇಶ ಪ್ರಾರಂಭ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಉನ್ನತ ಶಿಕ್ಷಣ ಇಲಾಖೆ, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ಬೆಂಗಳೂರು ಅಡಿಯಲ್ಲಿ ನೂತನವಾಗಿ ಪ್ರಾರಂಭವಾದ ಹೊಳೆ ಆಲೂರಿನ ಸರಕಾರಿ ಪಾಲಿಟೆಕ್ನಿಕ್ ಕಾಲೇಜಿಗೆ ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ಎಸ್‌ಎಸ್‌ಎಲ್‌ಸಿ/ತತ್ಸಮಾನ ಪಾಸಾದ ವಿದ್ಯಾರ್ಥಿಗಳಿಗೆ 3 ವರ್ಷದ ಡಿಪ್ಲೊಮಾಕ್ಕೆ ನೇರ ಪ್ರವೇಶಾತಿಗಳು ಪ್ರಾರಂಭವಾಗಿವೆ.

ಸಂಸ್ಥೆಯಲ್ಲಿ ಕಂಪ್ಯೂಟರ್ ಸೈನ್ಸ್ ಇಂಜಿನಿಯರಿಂಗ್ ಹಾಗೂ ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್ ಇಂಜಿನಿಯರಿಂಗ್ ಕೋರ್ಸುಗಳಿಗಾಗಿ ತಲಾ 63 ಸೀಟುಗಳಂತೆ ಒಟ್ಟು 126 ಸೀಟುಗಳನ್ನು ಭರ್ತಿ ಮಾಡಲು ಸರ್ಕಾರ ಅನುಮತಿ ನೀಡಿದ್ದು, ಮೊದಲು ಬಂದವರಿಗೆ ಪ್ರಾಶಸ್ತ್ಯ ನೀಡಲಾಗುವದು. ಹೆಚ್ಚಿನ ಮಾಹಿತಿಗಾಗಿ ಸಂಸ್ಥೆಯ ಪ್ರಾಂಶುಪಾಲ ವಿನೋದಕುಮಾರ ಸೋನಾರ ದೂರವಾಣಿ ಸಂಖ್ಯೆ–8317433922 ಗೆ ಸಂಪರ್ಕಿಸಲು ಪ್ರಕಟಣೆ ತಿಳಿಸಿದೆ.

ಶಿರಹಟ್ಟಿ ಕ್ಷೇತ್ರದ ಸಮಸ್ಯೆಗಳ ಕುರಿತು ಸದನದಲ್ಲಿ ಧ್ವನಿ ಎತ್ತಿದ ಶಾಸಕ ಡಾ. ಚಂದ್ರು ಲಮಾಣಿ

ಕ್ಷೇತ್ರದ ಅಭಿವೃದ್ಧಿಗೆ ಅನುಕೂಲ ಕಲ್ಪಿಸಿ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿ ಮೀಸಲು ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಶಿರಹಟ್ಟಿ, ಲಕ್ಷ್ಮೇಶ್ವರ ಮತ್ತು ಮುಂಡರಗಿ ತಾಲೂಕುಗಳಲ್ಲಿಯ ಜ್ವಲಂತ ಸಮಸ್ಯೆಗಳ ಕುರಿತು ಗುರುವಾರ ನಡೆದ ವಿಧಾನಸಭೆ ಅಧಿವೇಶನದ ಶೂನ್ಯ ವೇಳೆಯಲ್ಲಿ ಶಾಸಕ ಡಾ. ಚಂದ್ರು ಲಮಾಣಿ ಬಂಜಾರ ಸಮಾಜದ ಗುರು, ಸಂತ ಸೇವಾಲಾಲರ್‌ನ್ನು ಸ್ಮರಿಸುತ್ತಾ ಧ್ವನಿ ಎತ್ತಿದ್ದಾರೆ. ಈ ವಿಚಾರ ಸದ್ಯ ಸಾಮಾಜಿಕ ಜಾಲತಾಣಗಳಲ್ಲಿ ವಿಡಿಯೋ ವೈರಲ್ ಆಗಿದೆ.

ಈ ಕುರಿತು ಪತ್ರಿಕೆಯೊಂದಿಗೆ ಮಾತನಾಡಿದ ಶಾಸಕ ಡಾ. ಚಂದ್ರು ಲಮಾಣಿ, ಶಿರಹಟ್ಟಿ ತಾಲೂಕಿನಲ್ಲಿಯ ನವೇಭಾವನೂರ ಗ್ರಾಮದಲ್ಲಿರುವ ಆಶ್ರಮ ಶಾಲೆಗೆ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಪ್ರವೇಶಾತಿ ಕೋರಿ ಬರುತ್ತಿದ್ದಾರೆ. ಆದರೆ, ಅವರಿಗೆ ಪ್ರವೇಶಾತಿ ಕೊಡಲು ಸಾಧ್ಯವಾಗುತ್ತಿಲ್ಲ. ಆದ್ದರಿಂದ ಜಿಲ್ಲೆಯ ಗಜೇಂದ್ರಗಡದಲ್ಲಿ ಮುಚ್ಚಲ್ಪಟ್ಟಿರುವ ಆಶ್ರಮ ಶಾಲೆಯನ್ನು ಶಿರಹಟ್ಟಿ ತಾಲೂಕಿಗೆ ಸ್ಥಳಾಂತರಿಸಬೇಕು ಎಂದು ಒತ್ತಾಯಿಸಲಾಗಿದೆ ಎಂದರು.

1975ಕ್ಕೂ ಮುಂಚಿತವಾಗಿಯೇ ಕ್ಷೇತ್ರದಲ್ಲಿ ಹಲವಾರು ರೈತರು ಬಗರ್‌ಹುಕುಂ ಸಾಗುವಳಿ

ಮಾಡುತ್ತಾ ಬಂದಿದ್ದು, 3 ಪೀಳಿಗೆಗಳ ಆಧಾರವನ್ನು ಕೇಳುತ್ತಿದ್ದಾರೆ. ಆದರೆ, ಸೂಕ್ತ ದಾಖಲಾತಿಗಳನ್ನು ಒದಗಿಸಲು ಸಾಧ್ಯವಾಗುತ್ತಿಲ್ಲ. ಇದಕ್ಕಾಗಿ ಜಿಲ್ಲೆಯ ನಾಗಾವಿ–ಬೆಳದಡಿ ಭಾಗಗಳ ರೈತರು ಹೋರಾಟ ನಡೆಸುತ್ತಿದ್ದಾರೆ. ಆದ್ದರಿಂದ, ಸರಕಾರದ ವತಿಯಿಂದ ಇವರೆಲ್ಲರಿಗೂ ಹಕ್ಕುಪತ್ರ ವಿತರಿಸುವ ಕೆಲಸವಾಗಬೇಕು. ಕಪ್ಪತ್ತಗುಡ್ಡ ಪ್ರದೇಶವು ಏಷ್ಯಾ ಖಂಡದಲ್ಲಿಯೇ ಪರಿಶುದ್ಧ ಗಾಳಿಯ ಲಭ್ಯತೆಯಿರುವ ಪ್ರದೇಶವಾಗಿದೆ. ನಿತ್ಯವೂ ಹಲವಾರು ಪ್ರವಾಸಿಗರು ಇಲ್ಲಿಗೆ ಆಗಮಿಸುತ್ತಾರೆ. ಆದ್ದರಿಂದ ಇದನ್ನು ಪ್ರವಾಸಿ ತಾಣವಾಗಿ ಅಭಿವೃದ್ಧಿಪಡಿಸಿ, ಪ್ರವಾಸಿಗರಿಗೆ ಅಗತ್ಯವಿರುವ ಮೂಲಸೌಲಭ್ಯಗಳನ್ನು ಒದಗಿಸಬೇಕು.

ಮುಂಡರಗಿ ಪಟ್ಟಣದಲ್ಲಿ ಸುಮಾರು 30–35ಸಾವಿರ ಜನಸಂಖ್ಯೆಯಿದ್ದು, ಇದುವರೆಗೂ ಪ್ರೌಢಶಾಲೆ ಮಂಜೂರಾಗಿಲ್ಲ. ಇದರಿಂದ ಇಲ್ಲಿಯ ವಿದ್ಯಾರ್ಥಿಗಳು ಗ್ರಾಮೀಣ ಪ್ರದೇಶಗಳ ಪ್ರೌಢಶಾಲೆಗಳಿಗೆ ಹೋಗುವಂತಾಗಿದೆ. ಇದನ್ನು ತಪ್ಪಿಸುವುದಕ್ಕಾಗಿ ಮುಂಡರಗಿಯಲ್ಲಿ ಹೈಸ್ಕೂಲ್ ಪ್ರಾರಂಭಿಸಬೇಕೆಂದು ಸಭಾಧ್ಯಕ್ಷರಿಗೆ ವಿನಂತಿಸಿದ್ದೇನೆ. ಸಂಬಂಧಿಸಿದ ಸಚಿವರು ಸಹ ಉತ್ತರ ನೀಡಿದ್ದಾರೆ ಎಂದರು.

ಶಿರಹಟ್ಟಿ ಕ್ಷೇತ್ರದಲ್ಲಿ ತುಂಗಭದ್ರಾ ನದಿ ಹಾದುಹೋಗಿದ್ದು, ಇಲ್ಲಿಯವರೆಗೆ ಶೇ.20ರಷ್ಟು ಮಾತ್ರ ನೀರಾವರಿ ಆಗಿದ್ದು, ಇನ್ನೂ 80% ಆಗಬೇಕಿದೆ. ಆದ್ದರಿಂದ, ಕ್ಷೇತ್ರದ ರೈತರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ನೀರಾವರಿ ಯೋಜನೆಗಳು ಜಾರಿಯಾಗಬೇಕು. ಇಲ್ಲಿ ಯಾವುದೇ ಕೈಗಾರಿಕೆಗಳು ಇಲ್ಲದಿರುವುದರಿಂದ, ಗ್ರಾಮೀಣ ಪ್ರದೇಶಗಳ ಜನರು ಉದ್ಯೋಗ ವಂಚಿತರಾಗಿ ಗುಳೇ ಹೋಗುತ್ತಿದ್ದಾರೆ. ಇದನ್ನು ತಪ್ಪಿಸುವ ಉದ್ದೇಶದಿಂದ ಸ್ಥಳೀಯ ಮಟ್ಟದಲ್ಲಿ ಕೈಗಾರಿಕೆಗಳ ಸ್ಥಾಪನೆಯಾಗಬೇಕು. ರೈತರು ಸಾಲಬಾಧೆ ಅಥವಾ ಇತರ ಕಾರಣಗಳಿಂದ ಆತ್ಮಹತ್ಯೆ ಮಾಡಿಕೊಂಡ ಸಂದರ್ಭದಲ್ಲಿ ಅಧಿಕಾರಿಗಳ ನಿರ್ಲಕ್ಷ್ಯದಿಂದ ಪರಿಹಾರ ನೀಡುವಲ್ಲಿ ವರ್ಷಗಳೇ ಉರುಳಿ ಹೋಗುತ್ತಿವೆ. ಇಂತಹ ಸಂದರ್ಭದಲ್ಲಿ ಒಂದು ತಿಂಗಳ ಒಳಗಾಗಿ ಮೃತರ ಕುಟುಂಬಗಳಿಗೆ ಪರಿಹಾರ ಸಿಗುವಂತೆ ವ್ಯವಸ್ಥೆ ಕಲ್ಪಿಸಬೇಕು.

– ಡಾ. ಚಂದ್ರು ಲಮಾಣಿ.
ಶಾಸಕರು, ಶಿರಹಟ್ಟಿ.

ಸೇವಾ ನ್ಯೂನತೆ ಎಸಗಿದ್ದ ಕೆಸಿಸಿ ಬ್ಯಾಂಕ್‌ಗೆ ಜಿಲ್ಲಾ ಗ್ರಾಹಕ ಪರಿಹಾರ ಆಯೋಗದಿಂದ ದಂಡ

ಮಂಜೂರಾದ ಸಾಲದ ಹಣ ತಡೆಹಿಡಿದು ಸತಾಯಿಸಿದ ಬ್ಯಾಂಕ್

■ ವಿಜಯಸಾಕ್ಷಿ ಸುದ್ದಿ, ಗದಗ

ಪ್ರಾಥಮಿಕ ಕೃಷಿ ಸಹಕಾರಿ ಸೊಸೈಟಿಯಿಂದ ಮಂಜೂರಾದ ಕೃಷಿ ಸಾಲದ ಹಣವನ್ನು ಸೊಸೈಟಿ ವತಿಯಿಂದ ಬ್ಯಾಂಕ್ ಖಾತೆಗೆ ಜಮಾ ಮಾಡಿದ್ದರೂ, ಮಂಜೂರಾದ ಸಾಲದ ಹಣವನ್ನು ಸಾಲಗಾರನಿಗೆ ನೀಡದಂತೆ ತಡೆಹಿಡಿದಿದ್ದ ಬ್ಯಾಂಕ್‌ಗೆ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗವು ಮಂಜೂರಾದ ಸಾಲದ ಹಣ, ಪರಿಹಾರವನ್ನೂ ನೀಡುವಂತೆ ಆದೇಶ ನೀಡಿದೆ.

ಗದುಗಿನ ಲಿಂಗದಾಳ ಗ್ರಾಮದ ಸಂಗಪ್ಪ ಶಿವಮೂರ್ತೆಪ್ಪ ಉಪವಾಸಿ ಎಂಬುವರಿಗೆ ಪ್ರಾಥಮಿಕ ಕೃಷಿ ಸಹಕಾರಿ ಸೊಸೈಟಿ ನಿಯಮಿತ ಲಿಂಗದಾಳ ಇವರು 95,400 ರೂ.ಗಳ ಕೃಷಿ ಸಾಲ

ಮಂಜೂರು ಮಾಡಿ, 14–8–2020ರಂದು ಅವರ ಬ್ಯಾಂಕ್ ಖಾತೆಗೆ ಜಮಾ ಮಾಡಿದ್ದರು. ಕೆಸಿಸಿ ಬ್ಯಾಂಕ್ ಕೇಂದ್ರ ಕಚೇರಿಯವರು ಮಂಜೂರಾದ ಸಾಲದ ಹಣವನ್ನು ಸಾಲಗಾರನಿಗೆ ನೀಡದಂತೆ ತಡೆಹಿಡಿದಿದ್ದರು. ಯಾವ ಕಾರಣಕ್ಕೆ ಹಣ ತಡೆಹಿಡಿಯಲಾಗಿದೆ ಎಂದು ಅನೇಕ ಬಾರಿ ವಿಚಾರಿಸಿದ್ದರೂ ಉತ್ತರಿಸಿರಲಿಲ್ಲ ಮತ್ತು ಕೊನೆಯಲ್ಲಿ, ವಕೀಲರ ಮೂಲಕ ನೋಟೀಸ್ ನೀಡಿದ್ದರೂ ಪ್ರತಿಕ್ರಿಯಿಸಿರಲಿಲ್ಲ.

ಅನಿವಾರ್ಯವಾಗಿ, ಜಿಲ್ಲಾ ಗ್ರಾಹಕರ ಆಯೋಗಕ್ಕೆ ದೂರು ಸಲ್ಲಿಸಿ, ಕೆಸಿಸಿ ಬ್ಯಾಂಕ್ ಮತ್ತು ಸೊಸೈಟಿಯವರು ಸೇವಾ ನ್ಯೂನತೆ ಎಸಗಿದ್ದು, ಸಾಲದ ಹಣ ಕೊಡಿಸುವಂತೆ ಕೋರಿ ದೂರು ಸಲ್ಲಿಸಿದ್ದರು. ಕೆಸಿಸಿ ಬ್ಯಾಂಕ್‌ನವರು ತಮ್ಮ ತಕರಾರಿನಲ್ಲಿ, 1997ರಲ್ಲಿ ಪ್ರಕಾಶ ಚನ್ನಬಸಪ್ಪ ಹಕ್ಕಪಕ್ಕಿ ಎಂಬುವರು ಪಡೆದಿದ್ದ 10 ಲಕ್ಷ ರೂ. ಸಾಲಕ್ಕೆ ಸಂಗಪ್ಪ ಉಪವಾಸಿ ಜಾಮೀನು ಆಗಿರುವುದರಿಂದ ಹಣ ಬಿಡುಗಡೆ ಮಾಡಿಲ್ಲ ಎಂದಿದ್ದರು.

ಸುದೀರ್ಘ ವಿಚಾರಣೆ ನಡೆಸಿ, ಕೆಸಿಸಿ ಬ್ಯಾಂಕ್‌ನವರು ಹಕ್ಕಪಕ್ಕಿಯವರಿಗೆ ಸಾಲ ಮಂಜೂರು ಮಾಡಿದ್ದು, ಸದರಿ ಸಾಲ ಬಾಕಿ ಇದೆ ಎಂದು ರುಜುವಾತುಪಡಿಸಿಲ್ಲ. ವಿನಾಕಾರಣ ಮಂಜೂರಾದ ಹಣ ತಡೆಹಿಡಿದು, ಸೇವಾ ನ್ಯೂನತೆ ಎಸಗಿದ್ದು ಸಾಬೀತಾಗಿದೆ ಎಂದು ತೀರ್ಪು ನೀಡಿ, ಕೆಸಿಸಿ ಬ್ಯಾಂಕ್‌ನವರು ದೂರುದಾರನಿಗೆ ಮಂಜೂರಾದ ಸಾಲದ ಹಣ 95,400 ರೂಗಳನ್ನು ಎರಡು ತಿಂಗಳ ಒಳಗಾಗಿ ಸಾಲಗಾರನಿಗೆ ನೀಡುವಂತೆ ಆದೇಶಿಸಿದೆ.

ದೂರುದಾರ ಆಯೋಗಕ್ಕೆ ಅಲೆದಾಡಿ ಮಾನಸಿಕ ಹಿಂಸೆ ಅನುಭವಿಸಿದ್ದರಿಂದ, ಆಯೋಗದ ಅಧ್ಯಕ್ಷ ಡಿ ವೈ ಬಸಾಪುರ, ಸದಸ್ಯ ರಾಜು ನಾಮದೇವ ಮೇತ್ರಿ ಹಾಗೂ ಸದಸ್ಯೆ ಯಶೋಧಾ ಭಾಸ್ಕರ ಪಾಟೀಲರನ್ನೊಳಗೊಂಡ ಪೀಠವು ದೂರುದಾರರಿಗೆ 25 ಸಾವಿರ ರೂ ಹೆಚ್ಚುವರಿ ಪರಿಹಾರ, ಪ್ರಕರಣದ ಖರ್ಚು 15 ಸಾವಿರ ರೂ ನೀಡುವಂತೆ ಆದೇಶ ಹೊರಡಿಸಿದ್ದಾರೆ.

ರೋಟರಿ ಸಂಸ್ಥೆಯಿಂದ ಪ್ಲಾಸ್ಟಿಕ್ ಮಾಲಿನ್ಯದ ಜಾಗೃತಿ

■ ವಿಜಯಸಾಕ್ಷಿ ಸುದ್ದಿ, ಗದಗ

ರೋಟರಿ ಸಂಸ್ಥೆ ಗದಗ–ಬೆಟಗೇರಿಯು 'ವಿಶ್ವ ಪೇಪರ್‌ಬ್ಯಾಗ್ ಡೇ' ಪ್ರಯುಕ್ತ ಪ್ಲಾಸ್ಟಿಕ್‌ನಿಂದಾಗುವ ಮಾಲಿನ್ಯದ ಕುರಿತು ಬೀದಿ ವ್ಯಾಪಾರಸ್ಥರಿಗೆ ಮಾಹಿತಿ ನೀಡಿ, ಕಾಗದದ ಚೀಲವನ್ನು ಹಂಚಿದರು.

ಜಗತ್ತಿನಲ್ಲಿ ಜನಸಂಖ್ಯೆ ಹೆಚ್ಚಾದಂತೆ ಮಾಲಿನ್ಯವೂ ಹೆಚ್ಚುತ್ತಾ ಹೋಗುತ್ತದೆ. ಅದರಲ್ಲಿ ಅತಿಯಾದ ಪ್ಲಾಸ್ಟಿಕ್ ಬಳಕೆಯಿಂದ ಪರಿಸರವು ಕಲುಷಿತಗೊಳ್ಳುವುದು ಮತ್ತು ಪ್ಲಾಸ್ಟಿಕ್ ಸಾವಿರಾರು ವರ್ಷಗಳ ಕಾಲ ಕೊಳೆಯದೇ ಹಾಗೇ ಉಳಿದು ಪರಿಸರಕ್ಕೆ ಹಾನಿಯುಂಟುಮಾಡುತ್ತದೆ. ಈ ಕಾರಣಕ್ಕಾಗಿ ಪ್ಲಾಸ್ಟಿಕ್ ಮಾಲಿನ್ಯವು ಜಗತ್ತಿನ ಅತಿ ದೊಡ್ಡ ಮಾಲಿನ್ಯವಾಗದೆ. ಪ್ಲಾಸ್ಟಿಕ್ ವಿಷಕಾರಿ ಮಾಲಿನ್ಯಕಾರಕಗಳನ್ನು ಹೊಂದಿದ್ದು

ಅದು ಪರಿಸರದಲ್ಲಿನ ನೀರು, ಗಾಳಿ ಹಾಗೂ ಮಣ್ಣಿನ ಮಾಲಿನ್ಯವನ್ನು ಹೆಚ್ಚಿಸುವುದಲ್ಲದೆ ನಿಸರ್ಗದ ಮೇಲೆ ಮಾರಕ ಪರಿಣಾಮವನ್ನು ಬೀರುತ್ತದೆ ಎಂದು ಸಂಸ್ಥೆಯ ಅಧ್ಯಕ್ಷ ರೊ. ಚಂದ್ರಮೌಳಿ ಜಾಲಿ ಬೀದಿ ವ್ಯಾಪಾರಸ್ಥರಿಗೆ ತಿಳಿಸಿದರು.

ಸಾರ್ವಜನಿಕರು ಪ್ಲಾಸ್ಟಿಕ್ ಚೀಲದ ಉಪಯೋಗವನ್ನು ನಿಲ್ಲಿಸಿ, ಕಾಗದದ ಚೀಲವನ್ನು ಬಳಸಬೇಕೆಂದು ಮನವಿ ಮಾಡಿದರು. ಈ ಸಂದರ್ಭದಲ್ಲಿ ಸಂಸ್ಥೆಯ ಸದಸ್ಯರಾದ ರೊ. ಡಾ. ಆರ್ ಬಿ ಉಪ್ಪಿನ, ರೊ.ಶಿವಾಚಾರ್ಯ ಹೊಸಳ್ಳಿಮಠ, ರೊ. ಕಮಲಾಕ್ಷಿ ಅಂಗಡಿ, ರೊ. ಅಕ್ಷಯ ಶೆಟ್ಟಿ ಮುಂತಾದವರು ಉಪಸ್ಥಿತರಿದ್ದರು. ಸಂಸ್ಥೆಯ ಕಾರ್ಯದರ್ಶಿ ರೊ. ವೀಣಾ ತಿರ್ಲಾಪೂರ ಸರ್ವರಿಗೂ ಧನ್ಯವಾದಗಳನ್ನು ತಿಳಿಸಿದರು.

ಶ್ರದ್ಧೆಯಿಂದ ಓದಿ ಭವಿಷ್ಯ ರೂಪಿಸಿಕೊಳ್ಳಿ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ವಿದ್ಯಾರ್ಥಿ ಜೀವನದಲ್ಲಿ ಶ್ರದ್ಧೆಯಿಂದ, ಸತತ ಪ್ರಯತ್ನದಿಂದ ಮಾತ್ರ ಯಶಸ್ಸು ಪಡೆಯಲು ಸಾಧ್ಯವಿದೆ ಎಂದು ಶಿಕ್ಷಣ ಪ್ರೇಮಿ ಬಿ ಜಿ ಅಣ್ಣಿಗೇರಿ ಗುರುಗಳ ಪ್ರತಿಷ್ಠಾನ ಸಮಿತಿ ಅಧ್ಯಕ್ಷ ಶಿವಕುಮಾರ ಪಾಟೀಲ ಹೇಳಿದರು.

ಅವರು ಪಟ್ಟಣದ ಸರಕಾರಿ ಪ್ರೌಢಶಾಲೆ(ಆರ್‌ಎಂಎಸ್‌ಎ) ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಮಾತನಾಡಿ, ಇಂದಿನ ಆಧುನಿಕ ಮತ್ತು ತಂತ್ರಜ್ಞಾನ ಯುಗದಲ್ಲಿ ಮಕ್ಕಳು ಈ ಹಂತದಲ್ಲಿ ಶ್ರದ್ಧೆಯಿಂದ ಅಭ್ಯಾಸ ಮಾಡಿದಲ್ಲಿ ಉತ್ತಮ ಪ್ರತಿಭಾವಂತರಾಗಿ ಹೊರಹೊಮ್ಮಲು, ನಿಮ್ಮ ಮುಂದಿನ ಭವಿಷ್ಯ ರೂಪಿಸಿಕೊಳ್ಳಲು

ಸಹಕಾರಿಯಾಗುತ್ತದೆ.

ನಾಳೆ ಮಹಾ ಸಚಿವ ಸಂಪುಟ ವಿಸ್ತರಣೆ ಸಾಧ್ಯತೆ; ಶಿವಸೇನೆ

■ ವಿಜಯಸಾಕ್ಷಿ ಸುದ್ದಿ, ಮುಂಬೈ

ಮಹಾರಾಷ್ಟ್ರ ಮುಖ್ಯಮಂತ್ರಿ ಏಕನಾಥ್ ಶಿಂಧೆ ಅವರು ಶುಕ್ರವಾರ ತಮ್ಮ ಸಚಿವ ಸಂಪುಟ ವಿಸ್ತರಣೆ ಮಾಡಿ, ಖಾತೆಗಳನ್ನು ಹಂಚಿಕೆ ಮಾಡುವ ಸಾಧ್ಯತೆಯಿದೆ ಎಂದು ಗುರುವಾರ ಆಡಳಿತರೂಢ ಶಿವಸೇನೆ ಹೇಳಿದೆ. ಆದರೆ ಪಕ್ಷದ ಪ್ರತಿಸ್ಪರ್ಧಿ ಬಣ, ಏಕನಾಥ್ ಶಿಂಧೆ ನೇತೃತ್ವದ ಬಣಕ್ಕೆ ಸೇರಿದ ಶಾಸಕರಿಗೆ ಸಚಿವ ಸ್ಥಾನ ಸಿಗುವುದು ಅನುಮಾನ ಎಂದಿದೆ.

ಜುಲೈ 2 ರಂದು, ಎನ್‌ಸಿಪಿ ನಾಯಕ ಅಜಿತ್ ಪವಾರ್ ಮತ್ತು ಅವರ ಪಕ್ಷದ ಇತರ ಎಂಟು ಶಾಸಕರು ಮಹಾರಾಷ್ಟ್ರ ಸರ್ಕಾರದಲ್ಲಿ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದ್ದರು. ಈ ಅಚ್ಚರಿಯ ನಡೆ ಶರದ್ ಪವಾರ್ ನೇತೃತ್ವದ ಪಕ್ಷ ವಿಭಜನೆಗೆ ಕಾರಣವಾಯಿತು.

ನಾಳೆ ಸಂಪುಟ ವಿಸ್ತರಣೆ ಮತ್ತು ಖಾತೆಗಳ ಹಂಚಿಕೆ ಆಗುವ ಸಾಧ್ಯತೆಯಿದೆ ಎಂದು ಆಡಳಿತಾರೂಢ ಶಿವಸೇನೆ ವಕ್ತಾರ ಸಂಜಯ್ ಶಿರ್ಸತ್ ಅವರು ಹೇಳಿದ್ದಾರೆ.

ಈ ಬಾರಿ ಶಿಂಧೆ ನೇತೃತ್ವದ ಪಕ್ಷದ ಶಾಸಕರು ಸಂಪುಟದಲ್ಲಿ ಸ್ಥಾನ ಪಡೆಯುವುದು ಅನುಮಾನ ಎಂದು ಶಿವಸೇನೆ(ಯುಬಿಟಿ) ಆಡಳಿತ ಪಕ್ಷವನ್ನು ತರಾಟೆಗೆ ತೆಗೆದುಕೊಂಡಿದೆ.

ಹಳಿಗಳ ಮೇಲೆ ನೀರು: 300 ಮೇಲ್ /ಎಕ್ಸ್‌ಪ್ರೆಸ್, 406 ಪ್ಯಾಸೆಂಜರ್ ರೈಲುಗಳು ರದ್ದು

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಉತ್ತರ ಭಾರತದಲ್ಲಿ ಕಳೆದ ಕೆಲವು ದಿನಗಳಿಂದ ಭಾರೀ ಮಳೆಯಾಗುತ್ತಿದ್ದು, ಹಳಿಗಳ ಮೇಲೆ ನೀರು ನಿಂತಿರುವುದರಿಂದ ಜುಲೈ 7 ರಿಂದ ಜುಲೈ 15 ರ ನಡುವೆ 300ಕ್ಕೂ ಹೆಚ್ಚು ಮೇಲ್ ಮತ್ತು ಎಕ್ಸ್‌ಪ್ರೆಸ್ ರೈಲುಗಳು ಹಾಗೂ 406 ಪ್ಯಾಸೆಂಜರ್ ರೈಲುಗಳನ್ನು ರದ್ದುಗೊಳಿಸಲಾಗಿದೆ ಎಂದು ಅಧಿಕಾರಿಗಳು ಗುರುವಾರ ತಿಳಿಸಿದ್ದಾರೆ.

ಜಲಾವೃತದಿಂದ ಒಟ್ಟಾರೆಯಾಗಿ, ಸುಮಾರು 600 ಮೇಲ್/ಎಕ್ಸ್‌ಪ್ರೆಸ್ ರೈಲುಗಳು ಮತ್ತು 500 ಕ್ಕೂ ಹೆಚ್ಚು ಪ್ಯಾಸೆಂಜರ್ ರೈಲುಗಳ ಸಂಚಾರದಲ್ಲಿ ವ್ಯತ್ಯಯ ಉಂಟಾಗಿದೆ ಎಂದು ಅವರು ಹೇಳಿದ್ದಾರೆ.

ಉತ್ತರ ಭಾರತದಲ್ಲಿ ಕಳೆದ ಶನಿವಾರದಿಂದ ಮೂರು ದಿನಗಳಿಂದ ನಿರಂತರ ಮಳೆಯಾಗುತ್ತಿದೆ. ಜಮ್ಮು ಮತ್ತು ಕಾಶ್ಮೀರ, ಉತ್ತರಾಖಂಡ, ಹಿಮಾಚಲ ಪ್ರದೇಶ, ಹರಿಯಾಣ, ಉತ್ತರ ಪ್ರದೇಶ ಮತ್ತು ರಾಜಸ್ಥಾನದ ಹಲವು ಪ್ರದೇಶಗಳಲ್ಲಿ "ಅತ್ಯಂತ ಭಾರೀ ಮಳೆ" ದಾಖಲಾಗಿದೆ.

ಇದರ ಪರಿಣಾಮವಾಗಿ ನದಿಗಳು, ತೊರೆಗಳು ಮತ್ತು ಚರಂಡಿಗಳು ತುಂಬಿ ಹರಿಯುತ್ತಿದ್ದು, ಮೂಲಸೌಕರ್ಯಗಳಿಗೆ ಭಾರೀ ಹಾನಿಯುಂಟಾಗಿದೆ ಮತ್ತು ಜಮ್ಮು ಮತ್ತು ಕಾಶ್ಮೀರ, ಹಿಮಾಚಲ ಪ್ರದೇಶ, ಉತ್ತರಾಖಂಡ ಮತ್ತು ಪಂಜಾಬ್‌ನಲ್ಲಿ ಅಗತ್ಯ ಸೇವೆಗಳಿಗೆ ಅಡ್ಡಿಯಾಗಿದೆ.

ಗದಗ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿಗಳಾಗಿ ಅಧಿಕಾರ ವಹಿಸಿಕೊಂಡ ಕರ್ನಾಟಕ ರಾಜ್ಯ ನೌಕರ ಸಂಘದ ಗದಗ ಜಿಲ್ಲಾಧ್ಯಕ್ಷ ರವಿ ಎಲ್ ಗುಂಜಿಕರ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಯುವ ಮುಖಂಡರಾದ ರಮೇಶ ಎನ್ ಸಜ್ಜಗಾರ, ನಗರಸಭೆ ಸದಸ್ಯ ಅನಿಲ ಅಬ್ಬಿಗೇರಿ, ಬಿಂಕದಕಟ್ಟಿ ಗ್ರಾ ಪಂ ಉಪಾಧ್ಯಕ್ಷ ಅಶೋಕ ಕರೂರ, ಸಂದಕದ, ಮಂಜುನಾಥ ಶಾಂತಗಿರಿ ಮುಂತಾದವರು ಅಭಿನಂದಿಸಿ ಶುಭ ಹಾರೈಸಿದರು.

ಬಗರ್ ಹುಕುಂ, ಅರಣ್ಯ ಅವಲಂಬಿತರ ಆಹೋರಾತ್ರಿ ಧರಣಿ ಅಂತ್ಯ

ಎಲ್ಲಾ ಬೇಡಿಕೆಗಳ ಈಡೇರಿಕೆಗೆ ಒಪ್ಪಿಗೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತರಾಜ್ ವಿಶ್ವವಿದ್ಯಾಲಯಕ್ಕೆ ಜಮೀನು ಕಳೆದುಕೊಂಡ ರೈತರು, ಬಗರ್ ಹುಕುಂ ಸಾಗುವಳಿದಾರರ ಹಾಗೂ ಅರಣ್ಯ ಅವಲಂಬಿತರ ಬೇಡಿಕೆ ಈಡೇರಿಕೆಗಾಗಿ ಜುಲೈ 6ರಿಂದ ನಡೆಸುತ್ತಿದ್ದ ಆಹೋರಾತ್ರಿ ಧರಣಿ ಸತ್ಯಾಗ್ರಹ ಬುಧವಾರ ಅಂತ್ಯಗೊಂಡಿದೆ.

ಧರಣಿ ಸ್ಥಳಕ್ಕೆ ಭೇಟಿ ನೀಡಿದ್ದ ಸಚಿವ ಎಚ್ ಕೆ ಪಾಟೀಲರು, ರೈತರ ಎಲ್ಲಾ ಸಮಸ್ಯೆಗಳನ್ನು ಬಗೆಹರಿಸುವಂತೆ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಿದ್ದರು. ಈ ಕುರಿತು ಜಿಲ್ಲಾಧಿಕಾರಿಗಳು ಆದೇಶ ನೀಡುವವರೆಗೂ ಧರಣಿ ಮುಂದುವರೆಸುವದಾಗಿ ಪಟ್ಟು ಹಿಡಿದಿದ್ದರು.

ಹೋರಾಟಗಾರರ ಧರಣಿಗೆ ಮಣಿದ ಜಿಲ್ಲಾಡಳಿತ ಅವರ ಬೇಡಿಕೆಗಳನ್ನು ಈಡೇರಿಸುವುದಾಗಿ ಲಿಖಿತ ರೂಪದಲ್ಲಿ ಒಪ್ಪಿಗೆ ನೀಡಿದೆ. ಬುಧವಾರ ಧರಣಿ ಸ್ಥಳಕ್ಕೆ ಭೇಟಿ ನೀಡಿದ ಜಿಲ್ಲಾಧಿಕಾರಿಗಳು, ಶೀಘ್ರವೇ ಕಾರ್ಯರೂಪಕ್ಕೆ ಬರುವಂತೆ ಆದೇಶ ನೀಡುತ್ತೇನೆ. ಅರಣ್ಯ ಅವಲಂಬಿತರ ಹೊಸ ಅರ್ಜಿಗಳನ್ನು ಪಡೆಯಲು ಸರ್ಕಾರ ಅನುಮತಿ ನೀಡಿದೆ. ಹಾಗಾಗಿ ಹೊಸ ಅರ್ಜಿಗಳನ್ನು ಸಲ್ಲಿಸಬಹುದು. ಅದರೊಂದಿಗೆ ತಿರಸ್ಕೃತ ಅರ್ಜಿಗಳನ್ನು ಪುನಃ ಪರಿಶೀಲಿಸಲು ಜಿಲ್ಲಾ ಉಪವಿಭಾಗಾಧಿಕಾರಗಳ ನೇತೃತ್ವದಲ್ಲಿ ಪ್ರಕ್ರಿಯೆ ನಡೆಯಲಿದೆ ಎಂದರು. ಉತ್ತರ ಕರ್ನಾಟಕ ಮಹಾಸಭಾದ ರಾಜ್ಯಾಧ್ಯಕ್ಷ ರವಿಕಾಂತ ಅಂಗಡಿ ಮಾತನಾಡಿ, ಜಿಲ್ಲಾಧಿಕಾರಿಗಳು ನಮ್ಮ ಎಲ್ಲಾ ಬೇಡಿಕೆಗಳಿಗೆ ಪೂರಕವಾಗಿ ಸ್ಪಂದಿಸಿ, ಬೇಡಿಕೆಗಳನ್ನು ಈಡೇರಿಸುವ ಲಿಖಿತ ಭರವಸೆ ನೀಡಿರುವುದರಿಂದ ನಮ್ಮ 7 ದಿನದ ಆಹೋರಾತ್ರಿ ಧರಣಿಯನ್ನು ಇಂದಿಗೆ ಅಂತ್ಯಗೊಳಿಸುತ್ತಿದ್ದೇವೆ. ಸಚಿವ ಎಚ್ ಕೆ ಪಾಟೀಲ, ವಿಪ ಸದಸ್ಯ ಎಸ್ ವಿ ಸಂಕನೂರ, ಜಿಲ್ಲಾಧಿಕಾರಿಗಳು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು, ಉಪ ಅಧೀಕ್ಷರು, ಪೊಲೀಸ್ ಸಿಬ್ಬಂದಿ, ಮಾಧ್ಯಮ ಮಿತ್ರರಿಗೆ ಹಾಗೂ ಹೋರಾಟಕ್ಕೆ ಬೆಂಬಲಿಸಿದ ಎಲ್ಲಾ ಬಂಧುಗಳಿಗೆ ನಮ್ಮ ರೈತರ ಪರವಾಗಿ ತುಂಬು ಧನ್ಯವಾದಗಳು ಎಂದರು.

ಬಸವಣೆಪ್ಪ ಚಿಂಚಲಿ, ಎನ್ ಟಿ ಪೂಜಾರ, ಹಳ್ಳೂರಮಠ, ಪುರಪ್ಪ ನಾಯಕ್, ನಾಮದೇವ ಪೀರೋಜ್ ಸೇರಿದಂತೆ ಅನೇಕ ರೈತರು ಅಹೋರಾತ್ರಿ ಧರಣಿಯಲ್ಲಿ ಪಾಲ್ಗೊಂಡಿದ್ದರು.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯಕ್ಕೆ ಭೂಮಿಯನ್ನು ಕಳೆದುಕೊಂಡ ರೈತರ ಸಮಸ್ಯೆಗೆ ಸಂಬಂದಪಟ್ಟಂತೆ ಅಪರ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಸಮಿತಿಯನ್ನು ರಚಿಸಿ ಪರಿಹಾರಕ್ಕಾಗಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗುವುದು ಮತ್ತು ಅರಣ್ಯ ಅವಲಂಬಿತರ ಬಗ್ಗೆ ಮಾಹಿತಿಯನ್ನು ಸಂಭಂದಪಟ್ಟ ಅಧಿಕಾರಿಗಳಿಗೆ ತರಬೇತಿಯನ್ನು ನೀಡಲು ಈಗಾಗಲೇ ಸಮಾಜ ಕಲ್ಯಾಣ ಇಲಾಖೆಯ ನಿರ್ದೇಶಕರಿಗೆ ಸೂಚನೆ ನೀಡಲಾಗಿದೆ. ಬಗರ್ ಹುಕುಂ ಸಮಿತಿ ರಚಿಸಲು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಕಳುಹಿಸಲಾಗುವುದು.

– ವೈಶಾಲಿ ಎಂ ಎಲ್.
ಜಿಲ್ಲಾಧಿಕಾರಿಗಳು, ಗದಗ.

ಜಿಲ್ಲಾಧಿಕಾರಿಗಳು ನಮ್ಮ ಎಲ್ಲಾ ಬೇಡಿಕೆಗಳನ್ನು ಕಾರ್ಯರೂಪಕ್ಕೆ ತರುವ ಲಿಖಿತ ಆದೇಶ ನೀಡಿದ್ದು, ಆದಷ್ಟು ಬೇಗ ನಮ್ಮ ರೈತರು ನೆಮ್ಮದಿಯಿಂದ ತಮ್ಮ ಬದುಕನ್ನು ಸಾಗಿಸುವ ನಿಟ್ಟಿನಲ್ಲಿ ಜಿಲ್ಲಾಡಳಿತ ಕೆಲಸ ಮಾಡಲಿದೆ ಎಂಬ ಭರವಸೆಯಿಂದ ನಮ್ಮ ಆಹೋರಾತ್ರಿ ಧರಣಿಯನ್ನು ತಾತ್ಕಾಲಿಕವಾಗಿ ಹಿಂಪಡೆಯುತ್ತಿದ್ದೇವೆ.

– ರವಿಕಾಂತ ಅಂಗಡಿ.
ಉತ್ತರ ಕರ್ನಾಟಕ ಮಹಾಸಭಾದ ರಾಜ್ಯಾಧ್ಯಕ್ಷರು.

ಶಿಕ್ಷಣ ಸಚಿವ ಮಧು ಬಂಗಾರಪ್ಪ ಭರವಸೆ

ವೇತನಾನುದಾನ ವಿಳಂಬ ಸಮಸ್ಯೆಗೆ ಸ್ಪಂದಿಸುವೆ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

1987ರಿಂದ 1995ರ ಅವಧಿಯಲ್ಲಿ ಆರಂಭವಾದ ಅನುದಾನಿತ ಶಾಲಾ ಕಾಲೇಜುಗಳಿಗೆ ಈಗಾಗಲೇ ವೇತನಾನುದಾನ ಆರಂಭವಾಗಿದ್ದು, ಕೆಲ ತಾಂತ್ರಿಕ ಕಾರಣಗಳಿಂದ ಉಳಿದ 118 ಶಾಲೆಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಈ ಹಿಂದಿನ ಸರ್ಕಾರದ ಆದೇಶದ ಮೇರೆಗೆ ಆರ್ಥಿಕ ಇಲಾಖೆ ಅನುಮತಿಸಿತ್ತು. ವಿವಿಧ ಕಾರಣಗಳಿಂದ ಉಳಿದ 26 ಶಾಲೆಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವ ಮಧು ಬಂಗಾರಪ್ಪ ಸಹಮತ ವ್ಯಕ್ತಪಡಿಸಿದರು.

ಸಭಾಪತಿ ಬಸವರಾಜ ಹೊರಟ್ಟಿಯವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಪ್ರಸ್ತುತ ವಿಷಯವನ್ನು ಸಭಾಪತಿ ಹೊರಟ್ಟಿಯವರು ನನ್ನ ಗಮನಕ್ಕೆ ತರುವ ಮೂಲಕ ಇಂದಿನ ಸಭೆಯಲ್ಲಿ ಸುದೀರ್ಘವಾಗಿ ವಿವರಿಸಿದ್ದಾರೆ. 26 ಶಾಲೆಗಳಲ್ಲಿ ಸೇವೆ ಸಲ್ಲಿಸುತ್ತಿರುವ 55 ಶಿಕ್ಷಕ ಕುಟಂಬಗಳಿಗೆ ನ್ಯಾಯ ಒದಗಿಸುವುದು ನನ್ನ ಆದ್ಯ ಕರ್ತವ್ಯವಾಗಿದೆ. ಈ ವಿಷಯವನ್ನು ಆರ್ಥಿಕ ಇಲಾಖೆಯ ಅಧಿಕಾರಿಗಳೊಂದಿಗೆ ತಕ್ಷಣ ಸಭೆ ಕರೆದು ಪರಿಹಾರ ಕಂಡುಕೊಳ್ಳುವುದಾಗಿ ಭರವಸೆ ನೀಡಿದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಸಭಾಪತಿ ಬಸವರಾಜ ಹೊರಟ್ಟಿ ಮಾತನಾಡಿ, ಕಳೆದ 17 ವರ್ಷಗಳಿಂದ ನೂರಾರು ಶಾಲಾ ಕಾಲೇಜುಗಳು ವೇತನಾನುದಾನಕ್ಕೆ ಒಳಪಟ್ಟರೂ ತಾಂತ್ರಿಕ ಕಾರಣಗಳಿಂದಾಗಿ ಅಲ್ಲಿನ ಸಿಬ್ಬಂದಿ ವೇತನ ಪಡೆಯದೇ ಆತಂಕದ ಸ್ಥಿತಿಯಲ್ಲಿದ್ದರು. 26 ಶಾಲೆಗಳು ವೇತನಾನುದಾನದಿಂದ ವಂಚಿತವಾಗಿದ್ದವು.

ಅವುಗಳಿಗೂ ನ್ಯಾಯ ಒದಗಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ. ಸಚಿವ ಮಧು ಬಂಗಾರಪ್ಪನವರು 55 ಶಿಕ್ಷಕ ಕುಟುಂಬಗಳಿಗೆ ನ್ಯಾಯ ಒದಗಿಸುತ್ತಾರೆಂಬ ಸಂಪೂರ್ಣ ಭರವಸೆ ನನಗಿದೆ ಎಂದರು.

ಈ ಸಂದರ್ಭದಲ್ಲಿ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಪ್ರದಾನ ಕಾರ್ಯದರ್ಶಿ ಹಿತೇಶಕುಮಾರ ಸಿಂಗ್, ಆರ್ಥಿಕ ಇಲಾಖೆಯ ಜಾಫರ, ಸಭಾಪತಿಯವರ ವಿಶೇಷ ಕರ್ತವ್ಯಾಧಿಕಾರಿ ಡಾ.ಮಹೇಶ ವಾಳ್ವೇಕರ್, ವಿಶೇಷಾಧಿಕಾರಿ ಶೈಲಾ ಕೆ.ಡಿ. ಮುಂತಾದವರು ಉಪಸ್ಥಿತರಿದ್ದರು ಎಂದು ಡಾ.ಬಸವರಾಜ ಧಾರವಾಡ ತಿಳಿಸಿದ್ದಾರೆ.

ನಿವೇಶನ ಗುರುತಿಸಿಕೊಡುವಂತೆ ಒತ್ತಾಯ, ಪ್ರತಿಭಟನೆ

■ ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಸಿಂಗಟಾಲೂರು ಏತ ನೀರಾವರಿ ಯೋಜನೆಯಡಿ ಬರುವ ಬಿದರಹಳ್ಳಿ ಪುನರ್ವಸತಿ ಗ್ರಾಮದಲ್ಲಿ ತಮಗೆ ಸಂಬಂಧಿಸಿದ ನಿವೇಶನ ಗುರುತಿಸಿಕೊಡಬೇಕು ಎಂದು ಒತ್ತಾಯಿಸಿ ಬಿದರಹಳ್ಳಿ ಗ್ರಾಮದ ಗಣೇಶ ಬಸೇಗೌಡ್ರ ಕುಟುಂಬಸ್ಥರು ತಹಸೀಲ್ದಾರ ಕಾರ್ಯಾಲಯದ ಮುಂದೆ ಮಂಗಳವಾರ ಪ್ರತಿಭಟನೆ ನಡೆಸಿದರು.

ಸಿಂಗಟಾಲೂರು ಏತ ನೀರಾವರಿ ಯೋಜನೆ ಬ್ಯಾರೇಜ್ ಹಿನ್ನೀರಿಗೆ ಬಿದರಹಳ್ಳಿ ಗ್ರಾಮವು ಮುಳುಗಡೆಯಾಗಲಿದ್ದು, ಈಗಾಗಲೇ ಪುನರ್ವಸತಿ ಗ್ರಾಮದಲ್ಲಿ ಹಕ್ಕುಪತ್ರ ವಿತರಿಸಲಾಗಿದೆ. ನನ್ನ ಕುಟುಂಬಕ್ಕೆ ಪ್ಲಾಟ್ ನಂ.87ನ್ನು ಸರ್ಕಾರದಿಂದ ನೀಡಿದ್ದರೂ ಇದುವರೆಗೂ ನಮಗೆ ನಿವೇಶನ ದೊರಕಿಸಿಕೊಟ್ಟಿಲ್ಲ. ಸ್ಥಳೀಯ ಕೆಲ ನಾಗರಿಕರ ಒತ್ತಡದಿಂದ 8 ವರ್ಷವಾದರೂ ನಮಗೆ ನಿವೇಶನ ಕೊಡದೆ ಸತಾಯಿಸಲಾಗುತ್ತಿದೆ. ತಮ್ಮ ನಿವೇಶನ ಗುರುತಿಸಿಕೊಡಬೇಕು ಎಂದು ಆಗ್ರಹಿಸಿದರು.

ತಹಸೀಲ್ದಾರ ಶ್ರುತಿ ಮಳ್ಳಪ್ಪಗೌಡರ, ಪುನರ್ವಸತಿ ವಿಭಾಗದ ಎಇ ಸೋಮಶೇಖರ, ಮುಖಂಡರಾದ ವೈ ಎನ್ ಗೌಡರ, ಹೇಮಂತಗೌಡ ಪಾಟೀಲ, ಕಬ್ಬು ಬೆಳೆಗಾರರ ಸಂಘದ ರಾಜ್ಯ ಕಾರ್ಯಾಧ್ಯಕ್ಷ ವೀರನಗೌಡ ಪಾಟೀಲ ಮತ್ತಿತರರು ಸ್ಥಳಕ್ಕೆ ಭೇಟಿ ನೀಡಿ ಚರ್ಚಿಸಿದರು. ಈ ಕುರಿತಂತೆ ಗ್ರಾಮಕ್ಕೆ ತೆರಳಿ ಸ್ಥಳ ಪರಿಶೀಲಿಸಿ, ಮುಂದಿನ 15 ದಿನಗಳೊಳಗೆ ನಿವೇಶನ ಗುರುತಿಸಿಕೊಡಲು ಸೂಕ್ತ ಕ್ರಮ ವಹಿಸಲಾಗುವುದು ಎಂದು ತಹಸೀಲ್ದಾರರು ಭರವಸೆ ನೀಡಿದರು.

ಪ್ರತಿಭಟನೆಯಲ್ಲಿ ವಿನೋದಾ ಬಸೇಗೌಡ್ರ, ಶಶಿಕಲಾ ಬಸೇಗೌಡ್ರ, ಮಂಗಳಾ ಬಸೇಗೌಡ್ರ, ರೇಣುಕಾ ಬಸೇಗೌಡ್ರ, ಕೊಟೇಪ್ಪ ಬಸೇಗೌಡ್ರ, ಎಚ್ ಡಿ ಕಿಲಾರಿ ಮುಂತಾದವರಿದ್ದರು.

ಪರಿಸರ ಜಾಗೃತಿ ಕಾರ್ಯಕ್ರಮದಲ್ಲಿ ಶಂಭುಲಿಂಗ ಶಾಸ್ತ್ರಿಗಳ ಅಭಿಮತ

ಒಂದು ಮರ ಹತ್ತು ಮಕ್ಕಳಿಗೆ ಸಮ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಹತ್ತು ಕೆರೆಗೆ ಒಂದು ಸರೋವರ ಸಮ. ಹತ್ತು ಸರೋವರ ಒಬ್ಬ ಮಗನಿಗೆ ಸಾಟಿ. ಹತ್ತು ಮಕ್ಕಳಿಗೆ ಒಂದು ಮರ ಸಾಟಿ ಎಂದು ಅಬ್ಬಿಗೇರಿಯ ಶಂಭುಲಿಂಗ ಶಾಸ್ತ್ರಿಗಳು ಹೇಳಿದರು.

ಅವರು ಸಮೀಪದ ಕೋಟುಮಚಗಿ ಗ್ರಾಮದಲ್ಲಿ ಗದಗ ಜಿಲ್ಲಾ ಪಂಚಾಯತ್, ತಾಲೂಕು ಪಂಚಾಯತ್, ಅರಣ್ಯ ಇಲಾಖೆ, ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತು, ಕೋಟುಮಚಗಿ ಗ್ರಾಮ ಪಂಚಾಯಿತಿ ಇವರುಗಳ ಸಹಯೋಗದಲ್ಲಿ ಜರುಗಿದ ಪರಿಸರ ಜಾಗೃತಿ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದರು.

ಸಾನ್ನಿಧ್ಯ ವಹಿಸಿದ್ದ ಗಂಗಾಧರಯ್ಯ ಹಿರೇಮಠ ಮಾತನಾಡಿ, ನಮ್ಮ ಆರೋಗ್ಯ ನಮ್ಮ ಕೈಯಲ್ಲಿಯೇ ಇದೆ. ಪ್ರತಿಯೊಂದು ರೋಗಕ್ಕೆ ಔಷಧಿಯನ್ನೇ ಅವಲಂಬಿಸುತ್ತ, ನಮ್ಮ ವಿನಾಶಕ್ಕೆ ನಾವೇ ಮುನ್ನುಡಿಯಾಗಿದ್ದೇವೆ. ಸೃಷ್ಟಿಯಲ್ಲಿ ದೊರಕುವ ಸಂಪನ್ಮೂಲಗಳನ್ನು ಅವಶ್ಯಕ್ಕೆ ತಕ್ಕಂತೆ ಬಳಕೆ ಮಾಡದೆ ಅತಿರೇಕವಾಗಿ ಬಳಕೆ ಮಾಡುವದರಿಂದ ಮೂಲಭೂತ ಸೌಲಭ್ಯಗಳ ಕೊರತೆಯಾಗುತ್ತದೆ. ಇದರಿಂದ ಜಾಗೃತಗೊಳ್ಳದೆ ಹೋದಲ್ಲಿ ಮುಂದಿನ ಪೀಳಿಗೆಗೆ ಉಸಿರಾಡಲು ಗಾಳಿ, ಉಣ್ಣಲು ಆಹಾರದ ಕೊರತೆಯಾಗುವ ಸಾಧ್ಯತೆಗಳಿವೆ. ಅದಕ್ಕಾಗಿ ಪರಿಸರ ಸಂರಕ್ಷಣೆ ಮಾಡಿ ಅದನ್ನು ಪೋಷಿಸುವುದು ನಮ್ಮೆಲ್ಲರ ಹೊಣೆಯಾಗಿದೆ ಎಂದರು.

ಪತ್ರಕರ್ತ ವೆಂಕಟೇಶ ಇಮ್ರಾಪೂರ ಹರ್ಲಾಪೂರ ರಸ್ತೆಯ ಎರಡು ಬದಿಗಳಲ್ಲಿ ಸಸಿ ನೆಡುವುದರೊಂದಿಗೆ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಸಾವಯವ ಕೃಷಿಕ ಹಾಗೂ ರೋಣ ತಾಲೂಕಾ ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ ಅಧ್ಯಕ್ಷ ವೀರೇಶ ನೇಗಲಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಮುಖ್ಯ ಅತಿಥಿಗಳಾಗಿ ಪಾಲ್ಗೊಂಡ್ಡಿದ್ದ ಸಕ್ರಗೌಡ್ರು ಪೊಲೀಸ್‌ಪಾಟೀಲ, ನ್ಯಾಯವಾದಿ ಎಸ್ ಬಿ ಕುರಿ, ಮಾಜಿ ಸೈನಿಕ ಕಾಶಿನಾಥಗೌಡರ, ಉಪವಲಯ ಅರಣ್ಯಾಧಿಕಾರಿ ಆರ್ ವಾಯ್ ಕಂಬಳಿಯವರು ಸೇರಿದಂತೆ ಅನೇಕರು ಪರಿಸರ ಜಾಗೃತಿ ಕುರಿತು ಮಾತನಾಡಿದರು.

ಚಂದ್ರಶೇಖರಯ್ಯ ಭೂಸನೂರಮಠ, ಶಿವಪ್ಪ ನೇಗಲಿ, ಎಮ್ ಬಿ ಸಂಕನಗೌಡ್ರ, ಚನ್ನಬಸಪ್ಪ ಗೋಧಿ, ಮಾಜಿ ಸೈನಿಕ ಮಲ್ಲಪ್ಪ ಮೇಟಿ, ಮಲ್ಲಪ್ಪ ಕಿತ್ತೂರ, ಅಶೋಕ ಬ್ಯಾಹಟ್ಟಿ, ಶಿಕ್ಷಕ ಕೆ ಆರ್. ಹಾಲಕೇರಿ, ಜಡಿ ಗದಗ, ಅರಣ್ಯ ಇಲಾಖೆಯ ಸಹಾಯಕ ಬಸವರಾಜ ಅಂಗಡಿ, ಮಹೇಶ ನೀರಲಗಿ, ರಮೇಶ ಕಿತ್ತೂರ, ಮಲ್ಲಪ್ಪ ಮಂಗಳೂರ, ನಾಗಪ್ಪ ನೀರಲಗಿ, ಅಶೋಕ ಮ್ಯಾಗೇರಿ, ಸೋಮಣ್ಣ ಗೋಧಿ ಸೇರಿದಂತೆ ಪ್ರಾಥಮಿಕ ಶಾಲಾ ಶಿಕ್ಷಕರು, ಮಕ್ಕಳು ಉಪಸ್ಥಿತರಿದ್ದರು. ಶಿಕ್ಷಕ ಸಿ ಎಂ ಕೊಂಗವಾಡ ಸ್ವಾಗತಿಸಿ, ಕಾರ್ಯಕ್ರಮ ನಿರೂಪಿಸಿ, ಪರಿಸರ ಜಾಗೃತಿಯ ಪ್ರತಿಜ್ಞಾವಿಧಿ ಬೋಧಿಸಿದರು.

ಹಿಂದೆ ಹಳ್ಳಿಗಳಲ್ಲಿ ರೋಗಿಗಳ ಸಂಖ್ಯೆ ಕಡಿಮೆ ಇತ್ತು. ಹಾಗಾಗಿ ಆಗ ಊರಿಗೆ ಅಲ್ಲೊಬ್ಬ ಇಲ್ಲೊಬ್ಬ ವೈದ್ಯರು ಇರುತ್ತಿದ್ದರು. ಈಗ ರೋಗ ಮತ್ತು ರೋಗಿಗಳ ಸಂಖ್ಯೆ ಹೆಚ್ಚಳವಾಗಿ ಹಳ್ಳಿಗಳಲ್ಲಿ ಎಂಟು-ಹತ್ತು ಆಸ್ಪತ್ರೆಗಳಾಗಿವೆ. ಅವನ್ನೆಲ್ಲ ತಪ್ಪಿಸಬೇಕೆಂದರೆ ನಾವು ಆರೋಗ್ಯವಂತರಾಗಿ ಇರಬೇಕು. ಹಾಗಾಬೇಕಾದರ

ಶಾಲಾ ಸಂಸತ್ ರಚನೆ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಸಮೀಪದ ಅಸುಂಡಿ ಗ್ರಾಮದ ಹುಲಕೋಟಿ ಸಹಕಾರಿ ಶಿಕ್ಷಣ ಸಂಸ್ಥೆಯ ಪ್ರೌಢಶಾಲೆಯಲ್ಲಿ 2023ನೇ ಸಾಲಿನ ಶಾಲಾ ಸಂಸತ್ ರಚನೆ ಮಾಡಲಾಯಿತು.

ಈ ಸಂಬಂಧ ಅಣುಕು ಮತದಾನ ನಡೆಯಿತು.

ನಾಮಪತ್ರ ಸಲ್ಲಿಕೆ, ಪರಿಶೀಲನೆ, ನಾಮಪತ್ರ ಹಿಂತೆಗೆದುಕೊಳ್ಳುವುದು, ತೋರು ಬೆರಳಿಗೆ ಶಾಹಿ ಗುರುತು ಹಾಕುವುದು ಹಾಗೂ ಇವಿಎಂ ಮಶಿನ್ ಮುಲಕ ಮತದಾನ ಸೇರಿದಂತೆ ಚುನಾವಣೆಯಲ್ಲಿ ಕೈಗೊಳ್ಳುವ ಬಹುತೇಕ ಪ್ರಕ್ರಿಯೆಗಳನ್ನು ಪಾಲಿಸಲಾಯಿತು. ಚುನಾವಣೆಯಲ್ಲಿ ಆಯ್ಕೆಯಾದ ಮಕ್ಕಳಿಗೆ ಪ್ರತಿಜ್ಞಾವಿಧಿ ಬೋಧಿಸಲಾಯಿತು.

ಅಧ್ಯಕ್ಷತೆಯನ್ನು ಎಸ್ ಎಚ್ ರಾಮೇನಹಳ್ಳಿ, ಗದಗ ಡಯಟ್ ಉಪನಿರ್ದೇಶಕ ಜಿ ಎಲ್ ಬಾರಾಟೆಕ್ಕಿ, ಎಚ್ ಕೆ ಬೂಮಕ್ಕನವರ, ಎಫ್ ಎಸ್ ಮಾಡಳ್ಳಿ, ರಾಘು ನೀಲಗುಂದ, ಶಾಲಾ ಮುಖ್ಯ ಶಿಕ್ಷಕ ಎಂ ಎಚ್ ಸಾಳೇರ, ಎನ್ ವಿ ಹುಚ್ಚಣ್ಣವರ, ಟಿ ಎಚ್ ಖರೂರ, ಎಂ ಎಸ್ ಬಂಡಿ, ಎಸ್ ಎಸ್ ಚಿಕ್ಕಪ್ಪ, ಎಸ್ ಎಚ್ ಹರ್ತಿ, ಪಿ ವಿ ಇಠಗಿಮಠ, ಎಚ್ ಎಂ ಪೂಜಾರ, ಸಂಜೀವ ರಾಮೇನಹಳ್ಳಿ, ಸಿ ಎಂ ಬಾರಕೇರ ಮೊದಲಾದವರಿದ್ದರು.

ಪ್ರಧಾನಿ ಮೋದಿ ಮಾತು ಕೇಳಿದ್ದರೆ 5 ವರ್ಷ ನಾನೇ ಸಿಎಂ ಆಗಿರುತ್ತಿದ್ದೆ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಅಂದು ಪ್ರಧಾನಿ ನರೇಂದ್ರ ಮೋದಿ ಅವರ ಮಾತು ಕೇಳಿದ್ದರೆ 5 ವರ್ಷ ನಾನೇ ರಾಜ್ಯದ ಮುಖ್ಯಮಂತ್ರಿಯಾಗಿ ಇರುತ್ತಿದ್ದೆ ಎಂದು ಮಾಜಿ ಮುಖ್ಯಮಂತ್ರಿ, ಜೆಡಿಎಸ್ ನಾಯಕ ಎಚ್ ಡಿ ಕುಮಾರಸ್ವಾಮಿ ಅವರು ಗುರುವಾರ ವಿಧಾನಸಭೆಯಲ್ಲಿ ಅಚ್ಚರಿಯ ಹೇಳಿಕೆ ನೀಡಿದ್ದಾರೆ.

ಇಂದು ವಿಧಾನಸಭೆಯಲ್ಲಿ ರಾಜ್ಯಪಾಲರ ಭಾಷಣದ ವಂದನಾ ನಿರ್ಣಯದ ಮೇಲಿನ ಚರ್ಚೆಯ ವೇಳೆ ಸಿದ್ದರಾಮಯ್ಯ ಉತ್ತರ ನೀಡುತ್ತಿದ್ದ ಸಂದರ್ಭದಲ್ಲಿ ಆಪರೇಷನ್ ಕಮಲದ ಪ್ರಸ್ತಾಪವಾಯಿತು.

ಅಷ್ಟರಲ್ಲಿ ಮಧ್ಯಪ್ರವೇಶಿಸಿ ಮಾತನಾಡಿದ ಕುಮಾರಸ್ವಾಮಿ, ಆಪರೇಷನ್ ಕಮಲ ಎಂಬುದು ಇತ್ತು. ಆದರೆ ಮಾಧ್ಯಮಗಳಲ್ಲಿ ಕಳೆದ ಕೆಲವು ದಿನಗಳಿಂದ ಆಪರೇಷನ್ ಹಸ್ತ ಎಂಬ ಸುದ್ದಿ ಬರುತ್ತಿದೆ ಎಂದರು. ಇದಕ್ಕೆ ಪ್ರತಿಕ್ರಿಯಿಸಿದ ಸಿದ್ದರಾಮಯ್ಯ, ಏಕೆ ಅವರ ಜೊತೆ ಸೇರಿಕೊಂಡಿದ್ದೀರಿ ಎಂದು ಕುಮಾರಸ್ವಾಮಿ ಅವರನ್ನು ಪ್ರಶ್ನಿಸಿದರು.

ಸಿದ್ದರಾಮಯ್ಯ ಪ್ರಶ್ನೆಗೆ ಉತ್ತರಿಸಿದ ಕುಮಾರಸ್ವಾಮಿ, ಪ್ರಧಾನಿ ನರೇಂದ್ರ ಮೋದಿ ಅವರು 2019ರಲ್ಲಿ ನನ್ನ ಜೊತೆ ಒಂದೂವರೆ ಗಂಟೆ ಚರ್ಚೆ ಮಾಡಿದ್ದರು.

ಅವರ ಮಾತು ಕೇಳಿದ್ದರೆ ಐದು ವರ್ಷ ಸಿಎಂ ಆಗಿರುತ್ತಿದ್ದೆ ಎಂದು ಹೇಳಿದರು.

ಪದೇ ಪದೇ ಬಿಜೆಪಿಯ ಬಿ ಟೀಂ ಎಂದು ಜೆಡಿಎಸ್ ಅನ್ನು ಟೀಕಿಸುವ ಮುನ್ನ ಈ ವಿಚಾರ ತಿಳಿದುಕೊಳ್ಳಿ, ಕಾಂಗ್ರೆಸ್ ಜೊತೆಗೆ ಸಮ್ಮಿಶ್ರ ಸರ್ಕಾರ ನಡೆಸುತ್ತಿದ್ದ ಸಂದರ್ಭದಲ್ಲಿ ಲೋಕಸಭಾ ಚುನಾವಣೆಯ ವೇಳೆ ಪ್ರಧಾನಿ ನರೇಂದ್ರ ಮೋದಿ ಕರೆದು ಒಂದೂವರೆ ಗಂಟೆಗಳ ಕಾಲ ಚರ್ಚಿಸಿದ್ದರು.

ಮುಂದಿನ ನಾಲ್ಕು ವರ್ಷ ಯಾವುದೇ ಸಮಸ್ಯೆ ಇರೊಲ್ಲ, ಸರ್ಕಾರಕ್ಕೆ ಬೆಂಬಲ ಕೊಡುತ್ತೇವೆ ಎಂದು ಆಹ್ವಾನ ನೀಡಿದ್ದರು. ಅವರ ಮಾತು ಕೇಳಿದ್ದರೆ ಕಳೆದ ಐದು ವರ್ಷಗಳ ಪೂರ್ಣ ಅವಧಿಗೆ ನಾನೇ ಸಿಎಂ ಆಗಿರುತ್ತಿದ್ದೆ.

ಆದರೆ ನಾನು ಅದನ್ನು ತಿರಸ್ಕಾರ ಮಾಡಿದೆ. ಕಪ್ಪು ಚುಕ್ಕೆ ಬರಬಾರದು ಎಂಬ ಕಾರಣಕ್ಕಾಗಿ ಮುಂದುವರಿದೆ ಎಂದು ಕುಮಾರಸ್ವಾಮಿ ತಿಳಿಸಿದ್ದಾರೆ.

ಮನೀಶ್ ಸಿಸೋಡಿಯಾ ಜಾಮೀನು ಅರ್ಜಿ ವಿಚಾರಣೆ ಇಂದು

▶▶ ಮೊದಲನೇ ಪುಟದಿಂದ

ಮನೀಶ್ ಸಿಸೋಡಿಯಾ ಅವರು ತಮ್ಮ ಪತ್ನಿ ತೀವ್ರ ಅನಾರೋಗ್ಯದಿಂದ ಬಳಲುತ್ತಿದ್ದು, ಆಸ್ಪತ್ರೆಗೆ ದಾಖಲಾಗಿದ್ದಾರೆ ಎಂದು ನ್ಯಾಯಾಲಯಕ್ಕೆ ತಿಳಿಸಿದ್ದಾರೆ. ಇದರ ಜೊತೆಗೆ ಜಾಮೀನು ನಿರಾಕರಿಸಿರುವ ಎರಡು ಹೈಕೋರ್ಟ್ ಆದೇಶಗಳನ್ನು ಪ್ರಶ್ನಿಸಿದ್ದಾರೆ. ಮಾಜಿ ಸಚಿವ ಮನೀಶ್ ಸಿಸೋಡಿಯಾ ಅವರ ವಿರುದ್ಧ ಕೇಂದ್ರೀಯ ತನಿಖಾ ದಳ ಮತ್ತು ಜಾರಿ ನಿರ್ದೇಶನಾಲಯವು ದಾಖಲಿಸಿರುವ ಪ್ರಕರಣಗಳಲ್ಲಿ ಜಾಮೀನು ಕೋರಿ ಸುಪ್ರೀಂ ಕೋರ್ಟ್‌ಗೆ ಮೊರೆ ಹೋಗಿದ್ದರು. 51 ವರ್ಷದ ಮನೀಶ್ ಸಿಸೋಡಿಯಾ ಅವರು ಭ್ರಷ್ಟಾಚಾರ ಆರೋಪ ಎದುರಿಸುತ್ತಿದ್ದಾರೆ. ಅಬಕಾರಿ ನೀತಿಯನ್ನು ರೂಪಿಸುವಲ್ಲಿ ಮದ್ಯದ ಕಂಪನಿಗಳು ಭಾಗಿಯಾಗಿವೆ ಎಂದು ಸಿಬಿಐ ಆರೋಪಿಸಿದೆ.

ಮುಂದಾಲೋಚನೆಗಿಳಿದ ಕಾಂಗ್ರೆಸ್ ಸರ್ಕಾರ

▶▶ ಮೊದಲನೇ ಪುಟದಿಂದ

ಹೇಳಿದರು. ಈ ವಿಚಾರವಾಗಿ ಉತ್ತರಿಸಿದ ಪಶುಸಂಗೋಪನಾ ಸಚಿವ ಕೆ ವೆಂಕಟೇಶ್, ಈ ಕಾನೂನುಗಳನ್ನು ರದ್ದುಗೊಳಿಸುವ ಯಾವುದೇ ಪ್ರಸ್ತಾಪ ಸರ್ಕಾರದ ಮುಂದಿಲ್ಲ ಎಂದು ಹೇಳಿದ್ದಾರೆ.

ಅಭೂತಪೂರ್ವ ಕ್ರಮದಲ್ಲಿ, ವೀರಶೈವ-ಲಿಂಗಾಯತ ಸಮುದಾಯಗಳ ಪಂಚ ಪೀಠಗಳ ಮಠಾಧೀಶರು ಮೊದಲು ಈ ವಿಷಯವನ್ನು ವಿರೋಧಿಸಿ, ಕಾನೂನುಗಳನ್ನು ರದ್ದುಗೊಳಿಸುವ ಪ್ರಸ್ತಾಪವನ್ನು ಕೈಬಿಡುವಂತೆ, ಈ ಎರಡೂ ಕಾನೂನುಗಳನ್ನು ಉಳಿಸಿಕೊಳ್ಳುವಂತೆ ಸರ್ಕಾರವನ್ನು ಒತ್ತಾಯಿಸಿದರು. ಬೇಡಿಕೆಗೆ ಸರ್ಕಾರ ಕಿವಿಗೊಡದಿದ್ದರೆ ಪ್ರತಿಭಟನೆ ನಡೆಸುವುದಾಗಿ ಅವರು ಎಚ್ಚರಿಕೆ ನೀಡಿದರು.

ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ (ನಿಯಂತ್ರಣ ಮತ್ತು ಅಭಿವೃದ್ಧಿ) (ತಿದ್ದುಪಡಿ) ಕಾಯ್ದೆ, 2020 ಅನ್ನು ತಿದ್ದುಪಡಿ ಮಾಡಲು ಸರ್ಕಾರ ಸದ್ಯ ಗಮನ ಹರಿಸಿದೆ. ಬಿಜೆಪಿ ಸರ್ಕಾರ ಜಾರಿಗೆ ತಂದ ಕಾನೂನು ರೈತರಿಗೆ ತಮ್ಮ ಉತ್ಪನ್ನಗಳನ್ನು ಎಪಿಎಂಸಿ ಯಾರ್ಡ್‌ಗಳಲ್ಲಿ ಮಾತ್ರವಲ್ಲದೆ ಹೊರಗೂ ಮಾರಾಟ ಮಾಡಲು ಅನುವು ಮಾಡಿಕೊಡುತ್ತದೆ. ಈ ವಿಧಿಯನ್ನು ತೆಗೆದುಹಾಕಲು ಸರ್ಕಾರವು ಕಳೆದ ವಾರ ಶಾಸಕಾಂಗದಲ್ಲಿ ತಿದ್ದುಪಡಿ ಮಸೂದೆಯನ್ನು ಮಂಡಿಸಿತು.

ಶಾಲಾ ಕಿಟ್‌ಗಳನ್ನು ಅರ್ಹ ಕಾರ್ಮಿಕರಿಗೆ ವಿತರಿಸುವಂತೆ ಕಾರ್ಮಿಕ ಅಧಿಕಾರಿಗಳಿಗೆ ಮನವಿ

ಸೌಲಭ್ಯಗಳನ್ನು ಅರ್ಹರಿಗೆ ತಲುಪಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯ ಕಾರ್ಮಿಕ ಇಲಾಖೆಯಲ್ಲಿ ನಡೆಯುತ್ತಿರುವ ಭ್ರಷ್ಟಾಚಾರ ತಡೆಗಟ್ಟಿ ಭ್ರಷ್ಟಾಚಾರದಲ್ಲಿ ಪಾಲುದಾರರಾದ ಸಿಬ್ಬಂದಿಯ ಮೇಲೆ ಸೂಕ್ತ ಕಾನೂನು ಕ್ರಮ ಕೈಗೊಳ್ಳಲು ಮತ್ತು ಕಲ್ಯಾಣ ಮಂಡಳಿಯಿಂದ ಖರೀದಿಸಿದ ಶಾಲಾ ಕಿಟ್‌ಗಳನ್ನು ಅರ್ಹ ಕಾರ್ಮಿಕರಿಗೆ ವಿತರಿಸುವಂತೆ ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಫೆಡರೇಶನ್ ಅಖಬಿಗ ಗದಗ ಜಿಲ್ಲಾ ಸಮಿತಿ ವತಿಯಿಂದ ಕಾರ್ಮಿಕ ಅಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಮನವಿ ಸಲ್ಲಿಸಿ ಮಾತನಾಡಿದ ಕಾರ್ಮಿಕರು, ಸುಮಾರು ಒಂದು ವರ್ಷ ಕಳೆದರೂ ಸೌಲಭ್ಯಗಳು ಅರ್ಹ ಕಾರ್ಮಿಕರನ್ನು ತಲುಪಿಲ್ಲ. ಆದರೆ ಕೆಲ ಏಜೆಂಟರ ಮೂಲಕ ಲಂಚ ಕೊಟ್ಟರೆ ಒಂದೇ ತಿಂಗಳಿನಲ್ಲಿ ಅನರ್ಹ ಕಾರ್ಮಿಕರಿಗೆ ಸೌಲಭ್ಯ ಮುಟ್ಟಿರುತ್ತದೆ. ಇದು ಅರ್ಹ ಕಾರ್ಮಿಕರಿಗೆ ಮಾಡುವ ಘೋರ ಅನ್ಯಾಯವಾಗಿದೆ. ಇದರಿಂದ ಕಾರ್ಮಿಕರ ಮಧ್ಯದಲ್ಲಿ ಕೆಲಸ ಮಾಡುವ ನಮ್ಮಂತಹ ಸಂಘಟನೆಯ ಮುಖಂಡರಿಗೆ ಬೇಸರವಾಗಿದೆ. ಆದ್ದರಿಂದ,

ಕಾರ್ಮಿಕರು ತ್ಯಾಗ ಬಲಿದಾನ ಹೋರಾಟದಿಂದ, ಕಾರ್ಮಿಕರ ಕಲ್ಯಾಣಕ್ಕೋಸ್ಕರವಾಗಿ ಪಡೆದ 1996ರ ಸೆಸ್ ಕಾನೂನಿನ ಕಲ್ಯಾಣ ಮಂಡಳಿಯ ಸೌಲಭ್ಯಗಳನ್ನು ಅರ್ಹ ಕಾರ್ಮಿಕರಿಗೆ ತಲುಪಿಸಲು ಮುಂದಾಗಬೇಕು. ಶಾಲಾ ಕಿಟ್‌ಗಳನ್ನು ಗದಗ ಜಿಲ್ಲೆಯ ಏಳು ತಾಲೂಕಿನಲ್ಲಿ ಇರುವ ನಮ್ಮ ಕಾರ್ಮಿಕರಿಗೆ ಇದೇ ಜುಲೈ 20 ಒಳಗಾಗಿ ಪ್ರತಿ ತಾಲುಕಿಗೆ 50 ಕಿಟ್‌ಗಳನ್ನು ತಲುಪಿಸಬೇಕೆಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಸಂಘದ ಅಧ್ಯಕ್ಷ ಮುತ್ತಪ್ಪ ಚಲವಾದಿ, ಪ್ರಧಾನ ಕಾರ್ಯದರ್ಶಿ ಮಾರುತಿ ಚಿಟಗಿ, ಖಜಾಂಚಿ ಮೆಹಬೂಬ್ ಹವಾಲ್ದಾರ, ಉಪಾಧ್ಯಕ್ಷ ಪೀರು ರಾಠೋಡ, ಶಿವರಾಜ ವಸ್ತದ, ನಿಂಗಪ್ಪ ವಡ್ಡರ, ಪಕೀರೇಶ ಹುಳ್ಯಾಳ, ಗರೀಬಸಾಬ ನಮಾಜಿ, ಸಹ ಕಾರ್ಯದರ್ಶಿಗಳಾದ ಬಸವರಾಜ ಗಂಗಮ್ಮನವರ, ಸೋಮಲಿಂಗಪ್ಪ ಗೊಲ್ಲರ, ಗಾಳೆಪ್ಪ ಹೊಸಮನಿ, ಅಂದಪ್ಪ ಕುರಿ ಸೇರಿದಂತೆ ಅನೇಕ ಕಾರ್ಮಿಕರು ಉಪಸ್ಥಿತರಿದ್ದರು.

> ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ಎಸ್‌ಎಸ್‌ಎಲ್‌ಸಿ, ಪಿಯುಸಿ ಓದುತ್ತಿರುವ ಕಟ್ಟಡ ಕಾರ್ಮಿಕರ ಮಕ್ಕಳಿಗೆ ಶಾಲಾ ಕಿಟ್ ನಮ್ಮ ಗದಗ ಕಾರ್ಮಿಕ ಇಲಾಖೆಗೂ ಬಂದಿದೆ. ಸದರಿ ಕಿಟ್ ವಿತರಣೆ ಮಾಡಲು ಕಲ್ಯಾಣ ಮಂಡಳಿಯ ನಿಯಮದ ಪ್ರಕಾರ ಜಿಲ್ಲಾ ಕಾರ್ಮಿಕ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಕಾರ್ಮಿಕರ ಸಂಘಟನೆಯ ಪ್ರತಿನಿಧಿಗಳ ಸಭೆ ಕರೆದು ಸಭೆಯಲ್ಲಿ ಚರ್ಚಿಸಿ ಕಾರ್ಮಿಕ ಸಂಘಟನೆಗಳ ಮುಖಾಂತರ ಅರ್ಹ ಕಟ್ಟಡ ಕಾರ್ಮಿಕರಿಗೆ ತಲುಪಿಸಬೇಕು. ಆದರೆ, ಇಲಾಖೆಯ ಅಧಿಕಾರಿಗಳು ಕಾರ್ಮಿಕ ಸಂಘಟನೆಗಳ ಮುಖಂಡರೊಂದಿಗೆ ಉದ್ಧಟತನದಿಂದ ವರ್ತಿಸುತ್ತಿದ್ದಾರೆ ಎಂದು ದೂರಿದರು.

ಬಸವೇಶ್ವರ ಯುವಕ ಸಂಘದ ನೂತನ ಪದಾಧಿಕಾರಿಗಳ ಆಯ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಬೆಟಗೇರಿಯ ಗೌರಿ ಗುಡಿ ಓಣಿಯ ಬಸವೇಶ್ವರ ಯುವಕ ಸಂಘದ ವಾರ್ಷಿಕ ಸಾಮಾನ್ಯ ಸಭೆಯಲ್ಲಿ ನೂತನ ಪದಾಧಿಕಾರಿಗಳ ಆಯ್ಕೆಯನ್ನು ಶಿವಪುತ್ರಪ್ಪ ಬೆಂತೂರ ಮತ್ತು ರಾಜು ಗುಡಿಮನಿ ಸಮ್ಮುಖದಲ್ಲಿ ಮಾಡಲಾಯಿತು.

ಬಸವೇಶ್ವರ ಯುವಕ ಸಂಘದ ಗೌರವಾಧ್ಯಕ್ಷರಾಗಿ ಮಹೇಶ ಚಿಕ್ಕನಗೌಡ್ರ, ಅಧ್ಯಕ್ಷರಾಗಿ ಮಂಜುನಾಥ ಬೆಂತೂರ, ಉಪಾಧ್ಯಕ್ಷರಾಗಿ ಮಹೇಶ ಹೊಸೂರು, ಕಾರ್ಯದರ್ಶಿಯಾಗಿ ಪುಟ್ಟರಾಜ ಪಲ್ಲೇದ, ಸಹ ಕಾರ್ಯದರ್ಶಿಯಾಗಿ ಕುಮಾರ ಕೊಡ್ಲಿ, ಖಜಾಂಚಿಯಾಗಿ ಕಾರ್ತಿಕ ಹೊಸೂರ, ಸದಸ್ಯರಾಗಿ ಮಂಜುನಾಥ ಮುಳ್ಳಾಳ, ಶರಣಪ್ಪ ಆಲೂರ, ರಾಜು ಪಟ್ಟಣಶೆಟ್ಟಿ, ಶಶಿಕುಮಾರ ಮುಳ್ಳಾಳ, ಪ್ರವೀಣ ಕದಡಿ, ರಾಚಪ್ಪ ಬೆಂತೂರ, ಬಸವರಾಜ ಪಟ್ಟೇದ ಅವರನ್ನು ಆಯ್ಕೆ ಮಾಡಲಾಯಿತು.

ಆಯ್ಕೆಯಾದ ಎಲ್ಲ ಪದಾಧಿಕಾರಿಗಳು ಸಮಾಜದ ಎಲ್ಲಾ ಕಾರ್ಯಗಳನ್ನು ಯಶಸ್ವಿಯಾಗಿ ನಡೆಸಿಕೊಡಬೇಕೆಂದು ಯುವಕರನ್ನು ಉದ್ದೇಶಿಸಿ ಬಸವರಾಜ ಕುಂದಗೋಳ ಹೇಳಿದರು. ಆಯ್ಕೆಯಾದ ಎಲ್ಲರಿಗೂ ಸಮಾಜ ಬಾಂಧವರು ಶುಭಾಶಯ ಕೋರಿದರು.

ಹರಳಯ್ಯನವರ ತ್ಯಾಗ, ಭಕ್ತಿ ಸಮಾಜಕ್ಕೆ ಮಾದರಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕನ್ನಡ ಸಾಹಿತ್ಯ, ಸಂಸ್ಕೃತಿ, ಪರಂಪರೆ ಮತ್ತು ಇತಿಹಾಸದ ಶ್ರೀಮಂತಿಕೆಗೆ ಶರಣರ, ವಚನಕಾರರ ಕೊಡುಗೆ ಅಪಾರವಾಗಿದ್ದು, ಪ್ರಸ್ತುತ ಸಮಾಜಕ್ಕೆ ಅವರ ಮೌಲ್ಯಗಳು ಪ್ರೇರಣೆಯಾಗಿವೆ ಎಂದು ಹಾನಗಲ್ ಕ್ಷೇತ್ರ ಶಿಕ್ಷಣಾಧಿಕಾರಿ ವಿ ವಿ ಸಾಲಿಮಠ ಅಭಿಪ್ರಾಯಪಟ್ಟರು.

ಅವರು ಬುಧವಾರ ಕಸಾಪ ತಾಲೂಕಾ ಘಟಕದಿಂದ ಎನ್ ಆರ್ ಸಾತಪುತೆ ನಿವಾಸದಲ್ಲಿ ಹಮ್ಮಿಕೊಂಡ 'ಮನೆ ಕನ್ನಡ-ಮನ ಕನ್ನಡ' ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿ, 12ನೇ ಶತಮಾನದ ಕಲ್ಯಾಣ ಕ್ರಾಂತಿಯ ಮೂಲಪುರುಷ ಶಿವಶರಣ ಹರಳಯ್ಯ ದಂಪತಿಗಳು ತಯಾರಿಸಿದ ಚೆಮ್ಮಾವುಗೆ(ಪಾದರಕ್ಷೆ) ಸಮ ಸಮಾಜ ನಿರ್ಮಾಣದ ಒಂದು ಕ್ರಾಂತಿಗೆ ಮುನ್ನುಡಿ ಬರೆದಂತಾಯಿತು. ಹರಳಯ್ಯನವರ ತ್ಯಾಗ, ಭಕ್ತಿ ಸಮಾಜಕ್ಕೆ ಮಾದರಿಯಾಗಿದೆ. ಅವರು ಸಮಾಜಕ್ಕೆ ನೀಡಿದ ಸಮಾನತೆಯ ತತ್ವ, ಮೌಲ್ಯಗಳು ಬದುಕಿಗೆ ಪ್ರೇರಣೆಯಾಗಿವೆ ಎಂದು ತಿಳಿಸಿ, ಹಳಯ್ಯನವರ ಜೀವನ ವೃತ್ತಾಂತ ವಿವರಿಸಿದರು.

ಕಾರ್ಯಕ್ರಮ ಉದ್ಘಾಟಿಸಿದ ನಿವೃತ್ತ ದೈಹಿಕ ಪರಿವೀಕ್ಷಕ ಆರ್ ಎನ್ ಪಂಚಭಾವಿ ಮಾತನಾಡಿ, ಇಂದಿನ ಪರಿಸ್ಥಿತಿಯಲ್ಲಿ 12ನೇ ಶತಮಾನದ ಶಿವಶರಣರ ಆದರ್ಶ ಜೀವನ ಅತ್ಯಂತ ಪ್ರಸ್ತುತ ಮತ್ತು ಅನುಕರಣೀಯ ಎಂದರು.

ಕಸಾಪ ತಾಲೂಕಾಧ್ಯಕ್ಷ ಈಶ್ವರ ಮೆಡ್ಲೇರಿ ಮಾತನಾಡಿ, ಕಸಾಪ ಮನೆ ಮನೆಯಲ್ಲಿ ಕನ್ನಡದ ಕಂಪು ಪಸರಿಸುವ ಕನ್ನಡ ಕಾರ್ಯಕ್ರಮಗಳನ್ನು ಸಂಘಟಿಸುತ್ತಿದೆ. ಅದಕ್ಕೆ ಸಮುದಾಯದಿಂದಲೂ ಉತ್ತಮ ಪ್ರತಿಕ್ರಿಯೆ ಸಿಗುತ್ತಿದೆ ಎಂದರು.

ಸಾಹಿತಿ ಪಿ ಬಿ ಖರಾಟೆ ಮಾತನಾಡಿದರು. ತಾಲೂಕಾ ಕದಳಿ ಮಹಿಳಾ ವೇದಿಕೆಯ ಸಹೋದರಿಯರು ವಚನ ಗಾಯನ ಪ್ರಸ್ತುತಪಡಿಸಿದರು. ನಿವೃತ್ತ ಶಿಕ್ಷಕ ವಿ ಎಂ ಹೂಗಾರ, ಎಂ ಜೆ ಕುರುವಿನಶೆಟ್ಟಿ ಅವರನ್ನು ಸನ್ಮಾನಿಸಲಾಯಿತು. ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್ ಕಮಿಟಿ ಅಧ್ಯಕ್ಷ ಚಂಬಣ್ಣ ಬಾಳಿಕಾಯಿ ವೇದಿಕೆಯಲ್ಲಿದ್ದರು. ಕಸಾಪ ಕಾರ್ಯದರ್ಶಿ ಎಂ ಎಸ್ ಚಾಕಲಬಿ, ಶಿಕ್ಷಕ ರವಿ ಉಮಚಗಿ, ಸಂತೋಷ ಸಾತಪುತೆ, ನಾಗರಾಜ ಮಜ್ಜಿಗುಡ್ಡ ನಿರ್ವಹಿಸಿದರು.

ಪ್ರತಿಯೊಬ್ಬರ ಖಾತೆಗೆ 15 ಲಕ್ಷ: ಕಾಂಗ್ರೆಸ್- ಬಿಜೆಪಿ ಜಟಾಪಟಿ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಪ್ರಧಾನಿ ನರೇಂದ್ರ ಮೋದಿ ಅವರು ಪ್ರತಿಯೊಬ್ಬರ ಬ್ಯಾಂಕ್ ಖಾತೆಗೂ 15 ಲಕ್ಷ ರೂಪಾಯಿ ಜಮಾ ಮಾಡುವುದಾಗಿ ಭರವಸೆ ನೀಡಿದ್ದಾರೆ ಎಂಬ ವಿಚಾರಕ್ಕೆ ಸಂಬಂಧಿಸಿದಂತೆ ಗುರುವಾರ ವಿಧಾನಸಭೆಯಲ್ಲಿ ಆಡಳಿತ ಮತ್ತು ಪ್ರತಿಪಕ್ಷಗಳ ನಡುವೆ ತೀವ್ರ ಮಾತಿನ ಚಕಮಕಿ ನಡೆದಿದ್ದು, ಮೋದಿ ಭರವಸೆ ಬಗ್ಗೆ ಪುರಾವೆ ನೀಡುವಂತೆ ಆಡಳಿತಾರೂಢ ಬಿಜೆಪಿ ಒತ್ತಾಯಿಸಿದೆ.

ಇಂದು ರಾಜ್ಯಪಾಲರ ಭಾಷಣದ ವಂದನಾ ನಿರ್ಣಯದ ಮೇಲಿನ ಚರ್ಚೆಯಲ್ಲಿ ಭಾಗವಹಿಸಿ ಮಾತನಾಡಿದ ಕಾಂಗ್ರೆಸ್ ಶಾಸಕ ಕೋನರೆಡ್ಡಿ ಅವರು, ಅವರು(ಬಿಜೆಪಿ) ನಮ್ಮ (ಕಾಂಗ್ರೆಸ್) ಖಾತರಿ ಯೋಜನೆಗಳನ್ನು ಟೀಕಿಸುತ್ತಿದ್ದಾರೆ. ನಮ್ಮ ಸರ್ಕಾರ ಅದನ್ನು ಈಡೇರಿಸಲು ಕ್ರಮಗಳನ್ನು ತೆಗೆದುಕೊಳ್ಳುತ್ತಿರುವುದರಿಂದ ನಮ್ಮ ಭರವಸೆಗಳಿಗೆ ನಾವು ಬದ್ಧರಾಗಿದ್ದೇವೆ. ಆದರೆ ನೀವು ಪ್ರತಿಯೊಬ್ಬರ ಬ್ಯಾಂಕ್ ಖಾತೆಗೆ 15 ಲಕ್ಷ ರೂ.ಗಳನ್ನು ಜಮಾ ಮಾಡುವ ಭರವಸೆ ನೀಡಿದ್ದೀರಿ. ಆದರೆ ಒಂದೇ ಒಂದು ಬ್ಯಾಂಕ್ ಖಾತೆಗೂ ಹಣ ಜಮೆ ಮಾಡಿಲ್ಲ ಎಂದರು.

ನೀವು ಯುವಕರಿಗೆ 2 ಲಕ್ಷ ಉದ್ಯೋಗ ನೀಡುವುದಾಗಿ ಭರವಸೆ ನೀಡಿದ್ದೀರಿ, ಆದರೆ ಅದನ್ನು ಈಡೇರಿಸಲು ನಿಮ್ಮಿಂದ ಸಾಧ್ಯವಾಗಲಿಲ್ಲ. ರೈತರ ಆದಾಯವನ್ನು ದ್ವಿಗುಣಗೊಳಿಸುವ ಭರವಸೆ ನೀಡಿದ್ದೀರಿ ಎಂದು ಕೋನರೆಡ್ಡಿ ಹೇಳಿದರು.

ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿದ ಬಿಜೆಪಿ ಹಿರಿಯ ಮುಖಂಡ ಬಸನಗೌಡ ಪಾಟೀಲ್ ಯತ್ನಾಳ್, ಪ್ರತಿ ಬ್ಯಾಂಕ್ ಖಾತೆಗೆ 15 ಲಕ್ಷ ರೂ. ಜಮಾ ಮಾಡುವುದಾಗಿ ಪ್ರಧಾನಿ ಭರವಸೆ ನೀಡಿದ್ದಾರೆ ಎಂಬುದಕ್ಕೆ ಕನಿಷ್ಠ ಒಂದು ಸಾಕ್ಷ್ಯ ಅಥವಾ ವಿಡಿಯೋ ತುಣುಕನ್ನಾದರು ನೀಡುವಂತೆ ಕೋನರೆಡ್ಡಿ ಅವರಿಗೆ ಒತ್ತಾಯಿಸಿದರು.

"ಅವರು(ಕೋನರೆಡ್ಡಿ) ಏಕೆ ಬೋಗಸ್ ಮತ್ತು ಸುಳ್ಳು ವಿಷಯಗಳನ್ನು ಮಾತನಾಡುತ್ತಿದ್ದಾರೆ? ಕೆಲವು ಶ್ರೀಮ

ಇನ್ನರ್‌ವ್ಹೀಲ್ ಕ್ಲಬ್‌ನಿಂದ ಗುರುವಂದನೆ

■ ವಿಜಯಸಾಕ್ಷಿ ಸುದ್ದಿ, ಗದಗ

ಇನ್ನರ್‌ವ್ಹೀಲ್ ಕ್ಲಬ್ ಗದಗ-ಬೆಟಗೇರಿಯಿಂದ ಗುರುಪೂರ್ಣಿಮೆಯ ನಿಮಿತ್ತ ಗುರುವಂದನಾ ಕಾರ್ಯಕ್ರಮ ನಡೆಯಿತು.

ಕ್ಲಬ್‌ನ ಅಧ್ಯಕ್ಷೆ ರಜನಿ ಪಾಟೀಲ ಅವರು ಕ್ಲಬ್‌ನ ಸಂಸ್ಥಾಪಕ ಸದಸ್ಯೆ, ಮಾಜಿ ಅಧ್ಯಕ್ಷೆ ಮಂಗಲಾದೇವಿ ಮಾನ್ವಿ ಅವರನ್ನು ಸಂಸ್ಥೆಯ ಪರವಾಗಿ ಶಾಲು ಹೊದೆಸಿ, ಸತ್ಕರಿಸಿ ಮಾತನಾಡಿ, ಮಂಗಲಾದೇವಿ ಮಾನ್ವಿ ಅವರು ಸಂಸ್ಥೆಯ ಹಿರಿಯ ಸದಸ್ಯರಾಗಿದ್ದು, ಎಲ್ಲರಿಗೂ ಮಾರ್ಗದರ್ಶನ ಮಾಡಿದ್ದಾರೆ.

ಅವರನ್ನು ಗುರುಪೂರ್ಣಿಮೆ ನಿಮಿತ್ತ ಸನ್ಮಾನಿಸುತ್ತಿರುವುದು ಅರ್ಥಪೂರ್ಣವಾಗಿದೆ ಎಂದರು.

ಈ ಸಂದರ್ಭದಲ್ಲಿ ಪಿಡಿಸಿ ಪ್ರೇಮಾ ಗುಳಗೌಡ್ರ, ನಿಕಟಪೂರ್ವ ಅಧ್ಯಕ್ಷೆ ವಿಜಯಲಕ್ಷ್ಮೀ ಹೊಳ್ಳಿಯವರಮಠ, ಕಾರ್ಯದರ್ಶಿ ಹೇಮಾ ಪೊಂಗಾಲಿಯಾ, ಉಪಾಧ್ಯಕ್ಷೆ ರಾಜೇಶ್ವರಿ ಬಳ್ಳಾರಿ, ಖಜಾಂಚಿ ಮೀನಾಕ್ಷಿ ಸಜ್ಜನರ, ಐಎಸ್‌ಓ ಶಾಂತಾ ಮುಂದಿನಮನಿ, ಎಡಿಟರ್ ಪ್ರೇಮಾ ಮೇಟಿ, ವಿಜಯಲಕ್ಷ್ಮೀ ಮಾನ್ವಿ, ಸುಲೋಚನಾ ಐಹೊಳ್ಳಿ ಹಾಗೂ ಸಂಸ್ಥೆಯ ಸದಸ್ಯರು ಉಪಸ್ಥಿತರಿದ್ದರು.

ರಾಯರಡ್ಡಿಯವರ ಮೇಲೆ ಗೂಬೆ ಕೂರಿಸುವದು ಸರಿಯಲ್ಲ

■ ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಹಿರಿಯ ರಾಜಕಾರಣಿ ಬಸವರಾಜ ರಾಯರಡ್ಡಿ ಅವರು ಸದನದಲ್ಲಿ ಆನೆಗೊಂದಿ ವಲಯದ ಬಗ್ಗೆ ಮಾಡಿರುವ ಪ್ರಸ್ತಾಪವನ್ನು ತಪ್ಪಾಗಿ ಅರ್ಥೈಸಿರುವದಲ್ಲದೇ ಅದನ್ನೇ ರಾಜಕಾರಣ ಮಾಡುತ್ತಿರುವದಕ್ಕೆ ಮಹಿಳಾ ಕಾಂಗ್ರೆಸ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಜ್ಯೋತಿ ಎಂ ಗೊಂಡಬಾಳ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಹಿರಿಯ ಶಾಸಕರಾಗಿರುವ ಬಸವರಾಜ ರಾಯರಡ್ಡಿಯವರು ಸದನದಲ್ಲಿ ಮಾತನಾಡುವಾಗ ಆನೆಗೊಂದಿ ಭಾಗದ ಅನಧಿಕೃತ ರೆಸಾರ್ಟ್ ತೆರವು ವಿಚಾರ ಪ್ರಸ್ತಾಪ ಮಡುತ್ತ, ರೆಸಾರ್ಟ್ ಕಾರಣಕ್ಕೆ ಆ ಭಾಗದಲ್ಲಿ ಅಕ್ರಮ ಚಟುವಟಿಕೆಗಳು ನಡೆಯುತ್ತಿವೆ ಎಂದಿದ್ದಾರೆ. ಪ್ರತಿಭಟನೆಯೂ ಕೂಡ ಕಾಣದ ಕೈಗಳ ಕುಮ್ಮಕ್ಕಿನಿಂದಲೇ ನಡೆದಿದೆ. ಪೊಲೀಸರು ಅಕ್ರಮ ಚಟುವಟಿಕೆಗಳನ್ನು ಸಂಪೂರ್ಣವಾಗಿ ನಿಯಂತ್ರಿಸಬೇಕು ಎಂದು ಒತ್ತಾಯಿಸಿದ್ದಾರೆ.

ಗಂಗಾವತಿಯಲ್ಲಿ ಈಗ ಕಾಂಗ್ರೆಸ್ ಮತ್ತು ಹಣದ ಪಕ್ಷ ಮಾತ್ರ ಇದ್ದು, ಬಿಜೆಪಿ ಇತರರು ನಾಮಾವಶೇಷವಾಗಿದ್ದಾರೆ. ಅದನ್ನು ಜೀರ್ಣಿಸಿಕೊಳ್ಳಲಾಗದ ಹಲವರು ಕ್ಷುಲ್ಲಕ ಹೇಳಿಕೆ ನೀಡುತ್ತಿದ್ದಾರೆ. ಪ್ರಕರಣ ದಾಖಲಾಗದ ಮಾತ್ರಕ್ಕೆ ಅಲ್ಲಿ ಅಕ್ರಮಗಳೇ ಇಲ್ಲ ಎಂದು ಹೇಳುವಂತಿಲ್ಲ. ಸರಕಾರ ತುರ್ತಾಗಿ ಇಂತಹ ಎಲ್ಲಾ ಸ್ಥಳಗಳಲ್ಲಿ ದೊಡ್ಡ ಪ್ರಮಾಣದ ತನಿಖೆಗೆ ತಂಡ ರಚಿಸಬೇಕು ಎಂದು ಜ್ಯೋತಿ ಗೊಂಡಬಾಳ ಒತ್ತಾಯಿಸಿದ್ದಾರೆ.

ಪಂಪವೃತ್ತದ ಬಳಿ ಅನಧಿಕೃತ ಗೂಡಂಗಡಿ ತೆರವು

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಪಂಪವೃತ್ತದಲ್ಲಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ನಂ.4ರ ಕಾಂಪೌಂಡ್‌ಗೆ ಹೊಂದಿಕೊಂಡು ಅನಧಿಕೃತವಾಗಿ ನಿರ್ಮಿಸಿದ್ದ ಗೂಡಂಗಡಿಗಳನ್ನು ಪುರಸಭೆಯವರು ಬುಧವಾರ ತೆರವುಗೊಳಿಸಿದರು.

ಪಂಪ ವೃತ್ತದ ಬಳಿ ಹುಬ್ಬಳ್ಳಿಯ ಮಾರ್ಗದ ಊರುಗಳಿಗೆ ತೆರಳಲು ಅಲ್ಲಿ ಬಸ್ ತಂಗುದಾಣವಿದ್ದು, ಅಲ್ಲಿ ಸದಾ ಸಂಚಾರ ದಟ್ಟಣೆಯಿರುತ್ತದೆ. ರಸ್ತೆ ತಿರುವಿನಲ್ಲಿ ಶಾಲೆಯ ಕಾಂಪೌಂಡ್‌ಗೆ ಹೊಂದಿಕೊಂಡು ಹತ್ತಾರು ಗೂಡಂಗಡಿಗಳನ್ನು ಹಾಕಿಕೊಂಡಿದ್ದರಿಂದ ನಿರಂತವಾಗಿ ಅಲ್ಲಿ ಅನೇಕ ಕಾನೂನು ಬಾಹಿರ ಚಟುವಟಿಕೆಗಳಿಗೆ ಅನೂಕವಾದಂತಾಗಿತ್ತು. ಅಲ್ಲದೆ ಇದು ಜನ, ವಾಹನ ಸಂಚಾರಕ್ಕೆ ಅಡ್ಡಿಯಾಗಿತ್ತು. ಗೂಡಂಗಡಿಗಳಲ್ಲಿ ಎಗ್‌ರೈಸ್, ಗುಟ್ಕಾ, ಸಿಗರೇಟ್ ಮಾರಾಟದಿಂದ ಮಕ್ಕಳ ಆರೋಗ್ಯ ಮತ್ತು ಕಲಿಕೆಗೆ ಕಿರಿಕಿರಿ ಉಂಟಾಗುತ್ತಿತ್ತು. ಈ ಹಿನ್ನೆಲೆಯಲ್ಲಿ ಸಾರ್ವಜನಿಕರು ಅವುಗಳನ್ನು ತೆರವುಗೊಳಿಸುವಂತೆ ಪುರಸಭೆಗೆ ದೂರು ಸಲ್ಲಿಸಿದ್ದರು.

ಬುಧವಾರ ಬೆಳಗ್ಗೆ ಕಾರ್ಯಾಚರಣೆಗಿಳಿದ ಪುರಸಭೆ ಸಿಬ್ಬಂದಿ ಗೂಡಂಗಡಿಗಳನ್ನು ತೆರವುಗೊಳಿಸಿದರು. ಸಾರ್ವಜನಿಕರ ಮನವಿ ಸ್ಪಂದಿಸಿದ ಪುರಸಭೆಗೆ ಜನರು ಮೆಚ್ಚುಗೆ ವ್ಯಕ್ತಪಡಿಸಿದರು. ಪುರಸಭೆ ಆರೋಗ್ಯ ನಿರೀಕ್ಷಕ ಮಂಜುನಾಥ ಮುದಗಲ್, ಪೌರ ಕಾರ್ಮಿಕರು ಇದ್ದರು.

ಕರ್ತವ್ಯ ಲೋಪ: ಮೂವರು ಪಿಡಿಒ ಅಮಾನತು

■ ವಿಜಯಸಾಕ್ಷಿ ಸುದ್ದಿ, ಹಾಸನ

ಹಾಸನ ಜಿಲ್ಲೆಯ ಚನ್ನರಾಯಪಟ್ಟಣ ತಾಲ್ಲೂಕಿನ ಮೂವರು ಪಿಡಿಒಗಳನ್ನು ಕರ್ತವ್ಯ ಲೋಪ ಎಸಗಿದ ಆರೋಪದ ಮೇಲೆ ಅಮಾನತುಗೊಳಿಸಿ ಹಾಸನ ಜಿಲ್ಲಾ ಪಂಚಾಯತಿ ಸಿಇಒ ಪೂರ್ಣಿಮಾ ಅವರು ಆದೇಶ ಹೊರಡಿಸಿದ್ದಾರೆ.

ಸಾರ್ವಜನಿಕ ಉದ್ದೇಶಕ್ಕೆ ಮೀಸಲಿಟ್ಟ 18ಎ ನಿವೇಶನವನ್ನು ಖಾಸಗಿ ವ್ಯಕ್ತಿಗೆ ಮಂಜೂರು ಮಾಡಿಕೊಟ್ಟಿದ್ದಾರೆಂಬ ಆರೋಪದ ಹಿನ್ನೆಲೆಯಲ್ಲಿ ಮೂವರು ಪಿಡಿಒಗಳನ್ನು ಅಮಾನತು ಮಾಡಿದ್ದಾರೆ.

ಡಿ.ಕಾಳೇನಹಳ್ಳಿ ಪಿಡಿಒ ಸಿಎನ್ ನವೀನ್, ಕೆಂಬಾಳು ಪಿಡಿಒ ಕೃಷ್ಣೇಗೌಡ, ಡಿ.ಬಳದರೆ ಹಾಗೂ ದಿಂಡಗೂರು ಪಿಡಿಒ ರಾಮಸ್ವಾಮಿ ಅವರನ್ನು ಸೇವೆಯಿಂದ ಅಮಾನತುಗೊಳಿಸಲಾಗಿದೆ. ಈ ಮೂವರು ಚನ್ನರಾಯಪಟ್ಟಣ ತಾಲ್ಲೂಕಿನ ಗ್ರಾಮ ಪಂಚಾಯತಿಗಳಲ್ಲಿ ಪಿಡಿಒ ಆಗಿ ಕೆಲಸ ಮಾಡುತ್ತಿದ್ದರು. ಚನ್ನರಾಯಪಟ್ಟಣ ತಾಲ್ಲೂಕಿನ ಬಳದರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸಾರ್ವಜನಿಕ ಉಪಯೋಗಕ್ಕಾಗಿ ಮಿಸಲಿಟ್ಟ 18ಎ ನಿವೇಶನವನ್ನು ಖಾಸಗಿ ವ್ಯಕ್ತಿಯ ಹೆಸರಿಗೆ ನೋಂದಣಿ ಮಾಡಿರುವ ಹಿನ್ನೆಲೆಯಲ್ಲಿ ಈ ಮೂವರನ್ನು ಅಮಾನತು ಮಾಡಲಾಗಿದೆ.

ಬೆಂಗಳೂರು ಕೂಡ ಸುರಂಗ ಮಾರ್ಗ ಹೊಂದಲು ಸಾಧ್ಯ: ತಜ್ಞರು

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಬೆಂಗಳೂರಿನ ಟ್ರಾಫಿಕ್ ಸಮಸ್ಯೆ ತಡೆಗಟ್ಟಲು ರಾಜ್ಯ ಸರ್ಕಾರ ಕೈಗೆತ್ತಿಕೊಂಡಿರುವ ಸುರಂಗ ಮಾರ್ಗ ಯೋಜನೆ ಉತ್ತಮವಾಗಿದ್ದು, ಬೆಂಗಳೂರಿನಲ್ಲೂ ಕೂಡ ಸುರಂಗ ಮಾರ್ಗ ನಿರ್ಮಿಸಬಹುದು ಎಂದು ತಜ್ಞರು ಅಭಿಪ್ರಾಯಪಟ್ಟಿದ್ದಾರೆ.

ರಾಜ್ಯ ಸರ್ಕಾರದ ಸುರಂಗ ಮಾರ್ಗ ರಸ್ತೆಗಳ ಪ್ರಸ್ತಾಪವು ಹೆಚ್ಚು ಗಮನ ಸೆಳೆಯುತ್ತಿದ್ದು, ವಿಶೇಷವಾಗಿ ಮಹಾರಾಷ್ಟ್ರವು ಮುಂಬೈ ಕರಾವಳಿ ಸುರಂಗ ರಸ್ತೆ ಯೋಜನೆಯನ್ನು ಕೈಗೆತ್ತಿಕೊಂಡ ನಂತರ, ನಮ್ಮ ಬೆಂಗಳೂರು ಸಹ ಇದೇ ರೀತಿಯ ಯೋಜನೆಯನ್ನು ಹೊಂದಬಹುದು. ಬೆಂಗಳೂರು ಇದು ಸಡಿಲವಾದ ಭೂಮಿ ಮತ್ತು ಗಟ್ಟಿಯಾದ ಬಂಡೆಯ ಮೇಲ್ಮೈಯನ್ನು ಹೊಂದಿದೆ ಎಂದು ಬಿಎಂಆರ್‌ಸಿಎಲ್ ಅಧಿಕಾರಿಯೊಬ್ಬರು ಹೇಳಿದ್ದಾರೆ.

ಮೆಟ್ರೋ ರೈಲು ಹಂತ 1 ರ ಸುರಂಗ ಯೋಜನೆಯಲ್ಲಿ ಕೆಲಸ ಮಾಡಿದ ಅಧಿಕಾರಿ, ಆದಾಗ್ಯೂ, ಸುರಂಗ ರಸ್ತೆ ಯೋಜನೆಯನ್ನು ಕೈಗೆತ್ತಿಕೊಳ್ಳುವ ಮೊದಲು ವಿವರವಾದ ಅಧ್ಯಯನದ ಅಗತ್ಯವನ್ನು ಒತ್ತಿ ಹೇಳಿದರು. ಯೋಜನೆಯು ನೀರಿನ ಪೈಪ್‌ಲೈನ್‌ಗಳು ಮತ್ತು ಕೇಬಲ್ ವ್ಯವಸ್ಥೆಗೆ ಯಾವುದೇ ಸಮಸ್ಯೆಗಳನ್ನು ಹೊಂದಿರುವುದಿಲ್ಲ ಏಕೆಂದರೆ ಅವುಗಳನ್ನು ಮೂರು ಮೀಟರ್‌ಗಳಿಗಿಂತ ಹೆಚ್ಚು ಆಳದಲ್ಲಿ ಹಾಕಲಾಗಿಲ್ಲ, ಆದರೆ ಸುರಂಗ ರಸ್ತೆ 80 ಅಡಿಗಿಂತ ಕಡಿಮೆ ಅಳದಲ್ಲಿ ಇರುತ್ತದೆ ಎಂದು ಹೇಳಿದ್ದಾರೆ.

ಶಾಲಾ ಸಂಸತ್ ಉದ್ಘಾಟನಾ ಕಾರ್ಯಕ್ರಮದಲ್ಲಿ ಶ್ರೀನಿಜಗುಣಪ್ರಭು ಸ್ವಾಮೀಜಿ ಅಭಿಮತ

ದೇವರು ನಿರ್ಮಿಸಿದ ಪರಿಸರವನ್ನು ಉಳಿಸಿಕೊಳ್ಳಬೇಕು

■ ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಈ ದೇಶದ ನೆಲ, ಜಲ, ಗಾಳಿ, ಸೇರಿದಂತೆ ಪರಿಸರವನ್ನು ಉಳಿಸಿಕೊಂಡು ಹೋಗುವ ಜವಾಬ್ದಾರಿಯು ಪ್ರತಿಯೊಬ್ಬರ ಮೇಲಿದೆ. ನಾವೆಲ್ಲರೂ ಪರಿಸರದ ಶಿಶುಗಳಾಗಿದ್ದೇವೆ. ವಿದ್ಯಾರ್ಥಿಗಳು ಜೀವನದಲ್ಲಿ ಆರೋಗ್ಯವಾಗಿರಲು ಪರಿಶುದ್ಧ ಆಹಾರ, ಗಾಳಿ, ನೀರು ಬೇಕಾಗುವಂತೆ ಪರಿಸರದಲ್ಲಿ ವಾಸಿಸುವ ಪ್ರಾಣಿ-ಪಕ್ಷಿಗಳು ಹಾಗೂ ಸಕಲ ಜೀವ ಸಂಕುಲಗಳೂ ಪರಿಸರವನ್ನು ಅವಲಂಬಿಸಿವೆ. ಹೀಗಾಗಿ ನಾವೆಲ್ಲರೂ ಪರಿಸರವನ್ನು ಉಳಿಸಿಕೊಳ್ಳಬೇಕು ಎಂದು ಶ್ರೀ ನಿಜಗುಣಪ್ರಭು ತೋಂಟದಾರ್ಯ ಮಹಾಸ್ವಾಮಿಜಿ ಅಭಿಪ್ರಾಯಪಟ್ಟರು.

> ಗ್ರಾಮ ಪಂಚಾಯಿತಿ ಸದಸ್ಯನಿಂದ ಹಿಡಿದು, ದೇಶದ ಪ್ರಧಾನಿ, ರಾಷ್ಟ್ರಪತಿಗಳೂ ಸೇರಿದಂತೆ ಎಲ್ಲಾ ಜನಪ್ರತಿನಿಧಿಗಳು ಸಂವಿಧಾನದ ಮೂಲಕ ಆಡಳಿತವನ್ನು ನಡೆಸುತ್ತಿದ್ದಾರೆ. ದೇಶದ ಪ್ರಜೆಗಳಿಗೆ ಹಕ್ಕುಗಳ ಜೊತೆಗೆ ಕರ್ತವ್ಯಗಳನ್ನು ನೀಡಿದ್ದು, ಅವುಗಳನ್ನು ಸರಿಯಾಗಿ ಉಪಯೋಗಿಸಿಕೊಂಡು ಉತ್ತಮ ಸಂಸ್ಕೃತಿಯ ನಾಗರಿಕರಾಗಿ ಜೀವನವನ್ನು ಕಟ್ಟಿಕೊಳ್ಳಬೇಕು.
> – ಶ್ರೀ ನಿಜಗುಣಪ್ರಭು ತೋಂಟದಾರ್ಯ ಮಹಾಸ್ವಾಮೀಜಿ.

ಪಟ್ಟಣದ ಶ್ರೀ ಜ.ತೋಂಟದಾರ್ಯ ಸಿಬಿಎಸ್‌ಸಿ ವಸತಿ ಶಾಲೆಯಲ್ಲಿ ನಡೆದ ಶಾಲಾ ಸಂಸತ್ತಿನ ಉದ್ಘಾಟನೆ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಅವರು ಆರ್ಶಿವಚನ ನೀಡಿ, ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು.

ಮಕ್ಕಳು ತಂದೆ-ತಾಯಿಯವರನ್ನು ಪ್ರೀತಿಸಿ, ಗೌರವಿಸಿ ಜೋಪಾನ ಮಾಡಬೇಕು. ಆರೋಗ್ಯವಂತರಾಗಿ ಇರಲು ಹೆಣ್ಣುಮಕ್ಕಳಿಗೆ ಶೌಚಾಲಯವು ಇರಲೇಬೇಕು. ಶೌಚಾಲಯ ಇದ್ದರೆ ಮಾತ್ರವೇ ಉತ್ತಮ ಆರೋಗ್ಯ ಎಲ್ಲರದ್ದಾಗುತ್ತದೆ. ಪ್ರತಿ ಮನೆಯಿಂದಲೇ ರಾಜಕೀಯ ಪ್ರಾರಂಭವಾಗುತ್ತದೆ. ಶಾಸಕಾಂಗ, ಕಾರ್ಯಾಂಗ, ನ್ಯಾಯಾಂಗವು ಪ್ರತೀ ವಿದ್ಯಾರ್ಥಿಯ ಮನೆಯಿಂದಲೇ ಪ್ರಾರಂಭ ಅಗುತ್ತದೆ. ಇವುಗಳ ಬಗ್ಗೆಯೂ ವಿದ್ಯಾರ್ಥಿಗಳು ಸ್ಥೂಲವಾಗಿ ತಿಳಿದುಕೊಳ್ಳಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಾಜಿ ಸಚಿವ ಎಸ್ ಎಸ್ ಪಾಟೀಲ ವಹಿಸಿದ್ದರು. ವಿದ್ಯಾರ್ಥಿಗಳಾದ ಆಕಾಶ ಚವ್ಹಾಣ, ಸಂಜನಾ ಪೊಲೀಸ್‌ಪಾಟೀಲ, ಮಹ್ಮದ ಪಾರೂಕ್ ನದಾಫ್, ಶ್ರೇಯಾ ಹೊಸಮನಿ, ಶಿಕ್ಷಕಿ ವಿಶಾಲಾಕ್ಷಿ ಅಕ್ಕೂರು ತಮ್ಮ ಅನಿಸಿಕೆಗಳನ್ನು ವ್ಯಕ್ತಪಡಿಸಿದರು.

ಪ್ರಾಚಾರ್ಯ ಶರಣು ಬುಗಟಿ ಪ್ರತಿಜ್ಞಾವಿಧಿ ಬೋಧಿಸಿದರು. ವೇದಿಕೆಯಲ್ಲಿ ಶ್ರೀ ಗೋಣಿರುದ್ರ ಸ್ವಾಮಿಜಿ, ನಾರಾಯಣಪ್ಪ ಇಲ್ಲೂರು, ಈಶ್ವರಪ್ಪ ಹಂಚಿನಾಳ, ಕೊಟ್ರೇಶ ಅಂಗಡಿ, ನಾಗೇಶ ಹುಬ್ಬಳ್ಳಿ, ದ್ರುವಕುಮಾರ ಹೊಸಮನಿ, ಈಶಪ್ಪ ಬೆಟಗೇರಿ, ಶರಣು ಬುಗಟಿ ಉಪಸ್ಥಿತರಿದ್ದರು. ಪೃಥ್ವಿ ದೇಸಾಯಿ ಪ್ರಾರ್ಥಿಸಿದರು. ವಿನಯ ಬಿಚ್ಚಾಲಿ ಸ್ವಾಗತಿಸಿದರು. ಕೀರ್ತಿ ಕರೆಣ್ಣವರ ನಿರೂಪಿಸಿದರೆ, ಸಹನಾ ಕಲ್ಲಕುಟಿಗರ ವಂದಿಸಿದರು.

ಕೆಇಎ ಮೂಲಕ ಶೀಘ್ರದಲ್ಲಿ ಕೆ ಸೆಟ್ ಪರೀಕ್ಷೆ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಶೀಘ್ರದಲ್ಲೇ ಕರ್ನಾಟಕ ರಾಜ್ಯ ಸಹಾಯಕ ಪ್ರಾಧ್ಯಾಪಕರ ಅರ್ಹತಾ ಪರೀಕ್ಷೆ (ಕೆ-ಸೆಟ್) ನಡೆಸಲಾಗುವುದು ಎಂದು ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ. ಸುಧಾಕರ್ ಅವರು ಹೇಳಿದ್ದಾರೆ.

ಆಸಕ್ತ ಅಭ್ಯರ್ಥಿಗಳಿಗೆ ಹಾಗೂ ವಿದ್ಯಾರ್ಥಿಗಳಿಗೆ ತೊಂದರೆಯಾಗದಂತೆ ಆದಷ್ಟು ಬೇಗ ಪರೀಕ್ಷೆ ನಡೆಸಲು ಸರ್ಕಾರ ಕ್ರಮಕೈಗೊಳ್ಳುತ್ತಿದೆ ಎಂದು ಹೇಳಿದ್ದಾರೆ.

ಕೆಇಎ ಕಾರ್ಯನಿರ್ವಾಹಕ ನಿರ್ದೇಶಕಿ ಎಸ್ ರಮ್ಯಾ ಅವರು ಮಾತನಾಡಿ, ಪರೀಕ್ಷೆ ನಡೆಯಲು ವಿಶ್ವವಿದ್ಯಾಲಯ ಧನಸಹಾಯ ಆಯೋಗದ (ಯುಜಿಸಿ) ಅನುಮತಿಗಾಗಿ ಕಾಯಲಾಗುತ್ತಿದೆ. ಆಗಸ್ಟ್‌ನಲ್ಲಿ ಪರೀಕ್ಷೆಯನ್ನು ನಡೆಸಲು ಚಿಂತನೆ ನಡೆಸಿದ್ದೆವು. ಆದರೆ, ಯುಜಿಸಿಯಿಂದ ಇನ್ನೂ ಅನುಮತಿ ಸಿಕ್ಕಿಲ್ಲ. ಹೀಗಾಗಿ ಸೆಪ್ಟೆಂಬರ್ ತಿಂಗಳಿನಲ್ಲಿ ಪರೀಕ್ಷೆ ನಡೆಯುವ ಸಾಧ್ಯತೆಗಳಿವೆ ಎಂದು ತಿಳಿಸಿದ್ದಾರೆ.

2022ನೇ ಶೈಕ್ಷಣಿಕ ಸಾಲಿನಲ್ಲಿ ಆಯಾ ರಾಜ್ಯ ಸರ್ಕಾರಗಳು ಗುರುತಿಸಿರುವ ರಾಜ್ಯ ನೋಡೆಲ್ ಏಜನ್ಸಿಗಳಿಗೆ ಯುಜಿಸಿ ಯಿಂದ ಮಾನ್ಯತೆ ಅಗತ್ಯವಿರುವ ಕರ್ನಾಟಕ ರಾಜ್ಯ ಸಹಾಯಕ ಪ್ರಾಧ್ಯಾಪಕರ ಅರ್ಹತಾ ಪರೀಕ್ಷೆ (ಕೆ-ಸೆಟ್) ಯನ್ನು ನಡೆಸಲು ಮೈಸೂರು ವಿಶ್ವವಿದ್ಯಾಲಯಕ್ಕೆ ಅನುಮತಿ ನೀಡಿರುತ್ತದೆ. ಆದರೆ ಮೈಸೂರು ವಿಶ್ವವಿದ್ಯಾಲಯದಲ್ಲಿ ಜುಲೈ-2021 ರಲ್ಲಿ ನಡೆದ ಕೆ-ಸೆಟ್ ಪರೀಕ್ಷೆಯಲ್ಲಿ ಅವ್ಯವಹಾರ ನಡೆದಿದೆ ಎಂದು ಹಾಗೂ ಇತರರು ಸಂಪೂರ್ಣ ಹೊಣೆಗಾರರೆಂದು ದೂರುಗಳು ಬಂದಿದ್ದು, ಇದರ ಬಗ್ಗೆ ಪ್ರತ್ಯೇಕ ತನಿಖೆಗೆ ಸಮಿತಿ ರಚಿಸಿ ಆದೇಶಿಸಲಾಗಿದೆ.

ಈ ರೀತಿ ಅವ್ಯವಹಾರಗಳು ನಡೆದಲ್ಲಿ, ಅರ್ಹತೆಯಿರುವ/ಪ್ರತಿಭಾವಂತ ಸಾವಿರಾರು ಅಭ್ಯರ್ಥಿಗಳಿಗೆ ಅನ್ಯಾಯ ವಾಗುವುದರಿಂದ ಹಾಗೂ ಮುಂಬರುವ ಯುವ ಪೀಳಿಗೆಗೆ ಗುಣಮಟ್ಟದ ಶೈಕ್ಷಣಿಕ ವ್ಯವಸ್ಥೆ ಕಲ್ಪಿಸಲು ಸಾಧ್ಯವಾಗದೇ ಇರುವುದರಿಂದ, ಪರೀಕ್ಷೆಯಲ್ಲಿ ಪಾರದರ್ಶಕತೆಯನ್ನು ತರಲು ಕೆ-ಸೆಟ್ ಪರೀಕ್ಷೆಯನ್ನು ಸ್ವತಂತ್ರ ಸಂಸ್ಥೆ ನಡೆಸುವುದು ಸೂಕ್ತವಾಗಿರುತ್ತದೆಯೇ ಹೊರತು ಯಾವುದೇ ವಿಶ್ವವಿದ್ಯಾಲಯದಿಂದಲ್ಲ ಎಂಬುದನ್ನು ಮನಗಂಡು ಸರ್ಕಾರವು, ಮೈಸೂರು ವಿಶ್ವವಿದ್ಯಾಲಯವು 2021 ಜುಲೈ ನಲ್ಲಿ ನಡೆಸಿದ ಕೆ-ಸೆಟ್ ಪರೀಕ್ಷೆಯಲ್ಲಿ ನಡೆದ ಅವ್ಯವಹಾರಗಳ ಹಿನ್ನಲೆಯಲ್ಲಿ 2022ನೇ ಸಾಲಿನ ಕರ್ನಾಟಕ ರಾಜ್ಯ ಸಹಾಯಕ ಪ್ರಾಧ್ಯಾಪಕರ ಅರ್ಹತಾ ಪರೀಕ್ಷೆಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ನಡೆಸಲು ತೀರ್ಮಾನಿಸಿ, ಅದರಂತೆ ಆದೇಶ ಹೊರಡಿಸಲಾಗಿದೆ.

ಟೊಮ್ಯಾಟೊ ಕಾಪಾಡಲು ರಾತ್ರಿಯಲ್ಲಿ ಕಾವಲು ಕಾಯುವ ಕೋಲಾರ ರೈತರು

■ ವಿಜಯಸಾಕ್ಷಿ ಸುದ್ದಿ, ಕೋಲಾರ

ಮಾರುಕಟ್ಟೆಯಲ್ಲಿ ಟೊಮ್ಯಾಟೊ ಬೆಲೆ ಗಗನಕ್ಕೇರಿದೆ. ಈ ಪರಿಸ್ಥಿತಿಯಲ್ಲಿ ಅಲ್ಲಲ್ಲಿ ಟೊಮ್ಯಾಟೊ ಕಳವು ಪ್ರಕರಣ ನಡೆಯುತ್ತಲೇ ಇದೆ.

ಬೆಲೆ ಏರಿಕೆಯಾದಾಗಿಂನಿಂದ ತಮ್ಮ ತೋಟಗಳಲ್ಲಿ ಅದನ್ನು ಕಾಪಾಡಿಕೊಳ್ಳಲು ರೈತರು ಹರಸಾಹಸ ಪಡುತ್ತಿದ್ದಾರೆ, ಹಗಲು ರಾತ್ರಿ ಗಿಡದ ಬಳಿಯೇ ಮಲಗುತ್ತಿದ್ದಾರೆ. ಆದರೂ ಕಳ್ಳರಿಂದ ತಪ್ಪಿಸಿಕೊಳ್ಳಲು ಸಾಧ್ಯವಾಗುತ್ತಿಲ್ಲ.

ಈ ಮೊದಲು ಹಾಸನ ಜಿಲ್ಲೆಯಲ್ಲಿ ರೈತರೊಬ್ಬರ ಜಮೀನಿನಲ್ಲಿ 2.5 ಲಕ್ಷ ರೂಪಾಯಿ ಮೌಲ್ಯದ ಟೊಮೆಟೋ ಕಳ್ಳತನವಾಗಿತ್ತು. ಇದೀಗ ಕೋಲಾರದಲ್ಲಿ ಟೊಮ್ಯಾಟೊ ಬೆಳೆಗಾರರು ಕಳ್ಳಕಾಕರಿಂದ ರಕ್ಷಿಸಿಕೊಳ್ಳಲು ರಾತ್ರಿ ಹೊತ್ತು ಟಾರ್ಚ್ ಲೈಟ್ ಹಾಕಿಕೊಂಡು ಗಸ್ತು ತಿರುಗುತ್ತಿದ್ದಾರೆ. ರಾತ್ರಿ ಹೊತ್ತು ಕಳ್ಳರ ಕಾಟ ಹೆಚ್ಚಿರುವುದರಿಂದ ರೈತರು ರಾತ್ರಿ ವೇಳೆ ತಮ್ಮ ಜಮೀನು ಕಾಯಬೇಕಾದ ಪರಿಸ್ಥಿತಿ ಬಂದಿದೆ.

ಬದುಕನ್ನು ಸಿಹಿಯಾಗಿಸಿದ ಹಸಿ ಮೆಣಸಿನಕಾಯಿ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ತಾಲೂಕಿನ ಮಾಗಡಿ ಗ್ರಾಮದ ರೈತ ವೀರಣ್ಣ ಬಡ್ನಿ ತಮ್ಮ 3 ಎಕರ